MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 278 | ಗುರುವಾರ : 21-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 278 | THURSDAY : 21-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಪದಚ್ಯುತಿ ಮಸೂದೆ ಮಂಡನೆ

ನವದೆಹಲಿ,ಆ.20– ಪ್ರತಿಪಕ್ಷಗಳ ಪ್ರಬಲ ವಿರೋಧದ ನಡುವೆ ಲೋಕಸಭೆಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮೂರು ವಿವಾದಾತ್ಮಕ ಮಸೂದೆಗಳನ್ನು ಮಂಡಿಸಿದರು. ಗಂಭೀರ ಕ್ರಿಮಿನಲ್ ಆರೋಪಗಳ ಮೇಲೆ 30 ದಿನಗಳ ಕಾಲ ಜೈಲುವಾಸ ಅನುಭವಿಸಿದ್ದರೆ ಪ್ರಧಾನಮಂತ್ರಿ, ಕೇಂದ್ರ ಸಚಿವ, ಮುಖ್ಯಮಂತ್ರಿಗಳು ಅಥವಾ ಕೇಂದ್ರ ಸಹಾಯಕ ಸಚಿವರನ್ನು ಪದಚ್ಯುತಗೊಳಿಸುವ ಮಸೂದೆಯನ್ನು ಮಂಡಿಸಲಾಗಿದೆ.



ಕೇಂದ್ರಾಡಳಿತ ಪ್ರದೇಶಗಳ (ತಿದ್ದುಪಡಿ)ಮಸೂದೆ, ಸಂವಿಧಾನದ (130ನೇ ತಿದ್ದುಪಡಿ) ಮಸೂದೆ ಮತ್ತು ಜಮ್ಮು-ಕಾಶ್ಮೀರದ ಪುನರ್ ಸಂಘಟಿತ (ತಿದ್ದುಪಡಿ)ಮಸೂದೆಗಳನ್ನು ತೀವ್ರ ಗದ್ದಲ-ಕೋಲಾಹಲದ ನಡುವೆ ಗೃಹ ಸಚಿವರು ಮಂಡಿಸಿದರು.

ಈ ಮಸೂದೆಗಳಿಗೆ ಪ್ರತಿಪಕ್ಷಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿ ಇತರ ರಾಜ್ಯಗಳಲ್ಲಿ ಬಿಜೆಪಿಯೇತರ ಸರ್ಕಾರಗಳನ್ನು ಅಸ್ಥಿರಗೊಳಿಸಲು ಈ ಮಸೂದೆ ಮಂಡಿಸಲಾಗುತ್ತಿದೆ. ಈ ಮಸೂದೆಗಳನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿ ಸರ್ಕಾರದ ವಿರುದ್ಧ ಮುಗಿಬಿದ್ದರು.

ಇದೇ ವೇಳೆ ಲೋಕಸಭೆಯಲ್ಲಿಂದು ಆನ್‌ಲೈನ್ ಗ್ಯಾಂಬ್ಲಿಂಗ್ ಮಸೂದೆ ಮಂಡಿಸಲಾಯಿತು. ಆದರೆ, ಪ್ರತಿಪಕ್ಷಗಳು ಗದ್ದಲ ಕೋಲಾಹಲ ಎಬ್ಬಿಸಿ ಈ ಮಸೂದೆಗೆ ವಿರೋಧ ವ್ಯಕ್ತಪಡಿಸಿದವು. ಸುಗಮ ಕಲಾಪಕ್ಕೆ ಉಭಯ ಸದನಗಳಲ್ಲೂ ಯತ್ನಿಸಲಾಯಿತು.

ಆದರೆ, ಪ್ರತಿಪಕ್ಷಗಳ ಸದಸ್ಯರು ಕೋಲಾಹಲ ಎಬ್ಬಿಸಿದ್ದರಿಂದ ಉಭಯ ಸದನಗಳನ್ನೂ ಮಧ್ಯಾಹ್ನಕ್ಕೆ ಮುಂದೂಡಲಾಗಿತ್ತು.

ವಿರೋಧಪಕ್ಷಗಳು ಅಧಿಕಾರದಲ್ಲಿರುವ ರಾಜ್ಯ ಸರ್ಕಾರಗಳನ್ನು ಉರುಳಿಸಲು ಸಿಬಿಐ ಮತ್ತು ಜಾರಿ ನಿರ್ದೇಶನಾಲಯಗಳಿಗೆ ಅವಕಾಶ ಕಲ್ಪಿಸಲು ಕೇಂದ್ರ ಸರ್ಕಾರ ಹೊಸ ಮಸೂದೆ ತರುತ್ತಿದೆ' ಎಂದು ಕಾಂಗ್ರೆಸ್ ಸೇರಿದಂತೆ ಇಂಡಿಯಾ ಮೈತ್ರಿಕೂಟದ ಸಂಸದರು ಕೇಂದ್ರದ ವಿರುದ್ಧ ಹರಿಹಾಯ್ದಿದ್ದಾರೆ.

ವಿರೋಧಪಕ್ಷಗಳು ಅಧಿಕಾರದಲ್ಲಿರುವ ರಾಜ್ಯ ಸರ್ಕಾರಗಳನ್ನು ಉರುಳಿಸಲು ಸಿಬಿಐ ಮತ್ತು ಜಾರಿ ನಿರ್ದೇಶನಾಲಯಗಳಿಗೆ ಅವಕಾಶ ಕಲ್ಪಿಸಲು ಕೇಂದ್ರ ಸರ್ಕಾರ ಹೊಸ ಮಸೂದೆ ತರುತ್ತಿದೆ' ಎಂದು ಆರೋಪಿಸಲಾಗಿದೆ. 2ನೇ ಪುಟಕ್ಕೆ

## ವಸತಿ ನಿಲಯಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಆಗ್ರಹಿಸಿ ಎಸ್‌ಎಫ್‌ಐ ಪ್ರತಿಭಟನೆ



ಯುವ ಮಾರ್ಗ ಸುದ್ದಿ

**ದೇವದುರ್ಗ,ಆ.20–** ಪಟ್ಟಣದ ಹೊರವಲಯದಲ್ಲಿ ಇರುವ ಸಮಾಜ ಕಲ್ಯಾಣ ಇಲಾಖೆ ಮೆಟ್ರಿಕ್ ಪೂರ್ವ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಕೂಡಲೇ ಮಕ್ಕಳಿಗೆ ಮೂಲಭೂತ ಸೌಕರ್ಯ ಒದಗಿಸುವಂತೆ ಒತ್ತಾಯಿಸಿ ಎಸ್‌ಎಫ್‌ಐ ತಾಲೂಕು ಸಮಿತಿ ನೇತೃತ್ವದಲ್ಲಿ ಹಾಸ್ಟೆಲ್ ವಿದ್ಯಾರ್ಥಿ ಗಳು ಬುಧವಾರ ತಹಸೀಲ್ದಾರ್ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಬಳಿಕ ತಾಲೂಕು ಅಧ್ಯಕ್ಷ ಮಹಾಲಿಂಗ ದೊಡ್ಡಮನಿ ಮಾತನಾಡಿ ಸರಿಯಾಗಿ ಸರ್ಕಾರದ ಸೌಲಭ್ಯಗಳು ಮಕ್ಕಳಿಗೆ ತಲುಪುತ್ತಿಲ್ಲ. ಇದರಿಂದಾಗಿ ವಿದ್ಯಾರ್ಥಿಗಳು ಸಾಕಷ್ಟು ಕಷ್ಟ ಅನುಭವಿಸುತ್ತಿದ್ದಾರೆ, ಮಕ್ಕಳಿಗೆ ಸರಿಯಾದ ಸಮಯಕ್ಕೆ ರುಚಿಕರವಾದ ಪೌಷ್ಟಿಕ ಊಟ ಸಿಗುತ್ತಿಲ್ಲ. ಆಹಾರ ಕಳಪೆಯಿಂದ ಕೂಡಿದ್ದು ಜಿಲ್ಲಾಧಿಕಾರಿಗಳು ಭೇಟಿ ನೀಡಬೇಕು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು,

ಮಕ್ಕಳ ಊಟದಲ್ಲಿ ಬಾಲು ಹುಳು ಬರುತ್ತಿದ್ದಾವೆ , ಬೆಡ್ ಮತ್ತು ಕಾಟ್ಸ್ ತಟ್ಟೆ, ಸ್ವಚ್ಛತೆ ಕಿಟ್, ಹಾಗೂ ಫಸ್ಟ್ ಹೆಡ್ ಮಾಡಿಲ್ ಕಿಟ್, ಹಾಸ್ಟೆಲ್‌ನಲ್ಲಿ ಶೌಚಾಲಯಗಳ ಸ್ಥಿತಿ ಶೋಚನಿಯವಾಗಿದೆ. ನಿಲಯಗಳ ಸರಿಯಾದ ನಿರ್ವಹಣೆಯ ಕೊರತೆಯಿಂದಾಗಿ ಸ್ವಚ್ಛತೆಯ ಇಲ್ಲದೆ ವಸತಿ ನಿಲಯಗಳು ದುರ್ವಾಸನೆಯಿಂದ ಕೂಡಿವೆ. ಇದರಿಂದಾಗಿ ಹಲವು ವಿದ್ಯಾರ್ಥಿಗಳು ರೋಗಗಳಿಗೆ ತುತ್ತಾಗುತ್ತಿದ್ದಾರೆ. ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ವಿದ್ಯಾರ್ಥಿಗಳು ವಾರ್ಡನ್ ಅವರನ್ನು ಕೇಳಿದರೆ ಬೆದರಿಕೆ ಹಾಕಿರುವುದು ಬೆಳಕಿಗೆ ಬಂದಿದೆ. ಕೂಡಲೇ ವಾರ್ಡನ್ ಮೇಲೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು,

ಜಿಲ್ಲಾ ಮುಖಂಡರಾದ ದಿಲ್ ಶಾದ್ ಮಾತನಾಡಿ ಹಾಸ್ಟೆಲ್ ಗಳಲ್ಲಿ ಕಳಪೆಗುಣಮಟ್ಟದ ಆಹಾರ ಬಳಕೆ ತಡೆಗಟ್ಟಿ, ಗುಣಮಟ್ಟದ ಆಹಾರ ಕೊಡಬೇಕು. ವಿದ್ಯಾರ್ಥಿಗಳಿಗೆ ಸಿಗಬೇಕಾದ ಹಾಸ್ಟೇಲ್ ಮೂಲಭೂತ ಸೌಲಭ್ಯವನ್ನು ನೀಡದೆ ವಂಚಿಸುತ್ತಿರುವ ವಾರ್ಡನ್‌ಗಳ ಮೇಲೆ ಕೂಡಲೇ ಸೂಕ್ತ ತನಿಖೆ ನಡೆಸಿ ಕಾನೂನು ಕ್ರಮ ಜರುಗಿಸಬೇಕು.(2ನೇಪುಟಕ್ಕೆ)

## ನೀರಮಾನ್ವಿ ಯಲ್ಲಮ್ಮ ದೇವಿ ದೇವಸ್ಥಾನಕ್ಕೆ ಮೂಲ ಸೌಲಭ್ಯ ಕಲ್ಪಿಸಲು ಒತ್ತಾಯ

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.20–**ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿರುವ ಶ್ರೀನೀರಮಾನ್ವಿ ರೇಣುಕ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ವತಿಯಿಂದ ತಹಸಿೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಲಾಯಿತು.



ಬಿಜೆಪಿ ಮಾನ್ವಿ ಮಂಡಲ ಯುವ ಮೋರ್ಚಾ ಅಧ್ಯಕ್ಷರಾದ ರವಿಕುಮಾರ ಸಾಹುಕಾರ ಅವರು ಮನವಿ ಸಲ್ಲಿಸಿ ಮಾತನಾಡಿ, ನೀರಮಾನ್ವಿ ರೇಣುಕಯಲ್ಲಮ್ಮ ದೇವಿ ದೇವಸ್ಥಾನವು ರಾಯಚೂರು ಜಿಲ್ಲೆಯ ಅತ್ಯಂತ ಜನಪ್ರಿಯ ಧಾರ್ಮಿಕ ಕೇಂದ್ರಗಳಲ್ಲಿ ಒಂದಾಗಿದೆ. ಪ್ರತಿದಿನ, ವಿಶೇಷವಾಗಿ ಮಂಗಳವಾರ ಮತ್ತು ಅಮವಾಸ್ಯೆಯ ದಿನಗಳಲ್ಲಿ, ರಾಜ್ಯ ಮತ್ತು ಅಂತರರಾಜ್ಯಗಳಿಂದ ಸಾವಿರಾರು ಭಕ್ತರು ಇಲ್ಲಿಗೆ ಭೇಟಿ ನೀಡುತ್ತಾರೆ. ಆದರೂ, ದೇವಸ್ಥಾನದಲ್ಲಿ ಮೂಲಭೂತ ಸೌಕರ್ಯಗಳಾದ ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯ, ಸ್ನಾನಗೃಹ, ವಸತಿ ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಗಳ ಕೊರತೆ ಯಿಂದ ಭಕ್ತರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ತಿಳಿಸಿದರು.

ಅಲ್ಲದೆ, ದೇವಸ್ಥಾನಕ್ಕೆ ಸೇರಿದ 6 ಎಕರೆ 12 ಗುಂಟೆ ವಿಸ್ತೀರ್ಣದ ಜಾಗಕ್ಕೆ ತಡೆಗೋಡೆ ಇಲ್ಲದಿರುವುದರಿಂದ ಸ್ವಚ್ಛತೆಯ ಕೊರತೆ ಉಂಟಾಗಿದೆ. ದೇವಸ್ಥಾನವನ್ನು ಸರ್ಕಾರದ 'ಎ' ವರ್ಗದ ಪಟ್ಟಿಗೆ ಸೇರಿಸಿದರೆ ಹೆಚ್ಚಿನ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

**ತಹಸೀಲ್ದಾರ್ ಭರವಸೆ:** ಮನವಿ ಸ್ವೀಕರಿಸಿದ ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಅವರು, ದೇವಸ್ಥಾನದ 6 ಎಕರೆ 12 ಗುಂಟೆ ಪ್ರದೇಶವನ್ನು ಸರ್ವೇ ಮಾಡಲು ಸರ್ವೇ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದರು. ದೇವಸ್ಥಾನದ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆ ಸಿದ್ಧಪಡಿಸಿ, ಅಭಿವೃದ್ಧಿ ಕಾಮಗಾರಿಗಳ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗುವುದು. ಭಕ್ತರಿಗೆ ಅಗತ್ಯ ಮೂಲಸೌಕರ್ಯಗಳನ್ನು ಆದಷ್ಟು ಬೇಗ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಕೀಲ ವಿಶ್ವನಾಥ ಬಿ. ನಂದಿಹಾಳ್, ಉಮಾಪತಿ ನಾಯಕ ಗೋಪಾಲ ಇಬ್ರಾಂಪುರ, ನರಸಿಂಹ ಹೆಳವರ್ ಇದ್ದರು.

## ಡಿ.ದೇವರಾಜ ಅರಸು ಅವರ ವಿಚಾರಧಾರೆಗಳನ್ನು ಯುವಪೀಳಿಗೆ ಅನುಸರಿಸಬೇಕು: ಶಿವಾನಂದ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.20–**ಹಿಂದುಳಿದ ವರ್ಗದವರ ಏಳಿಗೆಗೆ ಕಾಳಜಿ ವಹಿಸಿ ರಾಜ್ಯದಲ್ಲಿ ಮಹತ್ವದ ಬದಲಾವಣೆಗೆ ಶ್ರಮಿಸಿದ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು ಅವರ ವಿಚಾರಧಾರೆಗಳನ್ನು ಯುವ ಪೀಳಿಗೆಯು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಬುಧವಾರ ದಂದು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆದ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು ಅವರ 110ನೇ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದ ಮುಖ್ಯಮಂತ್ರಿಗಳಾಗಿ ದೀರ್ಘಕಾಲ ಆಡಳಿತ ನಡೆಸಿ, ಹಿಂದುಳಿದ ವರ್ಗದವವರನ್ನು ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಯೊಂದಿಗೆ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಅರಸು ಅವರು ಪ್ರಮುಖ ಪಾತ್ರ ವಹಿಸಿದ್ದಾರೆ.

ಉಳುವವನೇ ಭೂಮಿ ಒಡೆಯ ಕಾರ್ಯಕ್ರಮದ ಜಾರಿ ತಂದು ಭೂಮಿಯನ್ನು ಉಳುವವರನ್ನೇ ಆ ಹೊಲದ ಒಡೆಯರನ್ನಾಗಿ ಮಾಡಿದರು ಎಂದು ತಿಳಿಸಿದರು.

ಅರಸು ಅವರು ಜಾರಿ ಮಾಡಿದ ಭೂಸುಧಾರಣೆ ಕಾರ್ಯಕ್ರಮದಿಂದಾಗಿ ಇಂದು ಅಸಂಖ್ಯೆ ರೈತರ ಬಾಳಲ್ಲಿ ಹೊಸ ಆಶಾಕಿರಣ ಮೂಡಿದೆ. ಹಾಸ್ಟೆಲ್‌ಗಳ ನಿರ್ಮಾಣ ಮತ್ತು ಮೀಸಲಾತಿ ನೀಡಿಕೆಯ ಕ್ರಮಗಳಿಂದಾಗಿ ಇಂದು ಗ್ರಾಮೀಣ ಭಾಗದಿಂದ ನಗರ ಪ್ರದೇಶಕ್ಕೆ ಬರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಓದಿಗೆ ಶೈಕ್ಷಣಿಕ ಪ್ರಗತಿಗೆ ಅನುಕೂಲವಾಗಿದೆ ಎಂದು ತಿಳಿಸಿದರು.

ಅನೇಕ ಕ್ರಾಂತಿಕಾರ್ಯ ಯೋಜನೆ ರೂಪಿಸಿ ಕಡು ಬಡವರ, ಹಿಂದುಳಿದ ವರ್ಗಗಳ ಬೆಳವಣಿಗೆಗೆ ಅಪಾರ ಕೊಡುಗೆ ನೀಡಿದ ಅರಸು ಅವರ ಜಯಂತಿ ಹಿನ್ನೆಲೆಯಲ್ಲಿ, ಅವರ ಮಾದರಿಯ ಆಡಳಿತದ ಕ್ರಮಗಳನ್ನು ಅನುಸರಿಸಬೇಕಿದೆ ಎಂದು ತಿಳಿಸಿದರು.

ಈ ವೇಳೆ ಉಪನ್ಯಾಸಕರಾಗಿ ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ವಿಷಯದ ಸಹ ಪ್ರಾಧ್ಯಾಪಕರಾದ ಡಾ.ಕೆ.ವೆಂಕಟೇಶ ಅವರು ಮಾತನಾಡಿ, ದೇವರಾಜ ಅರಸು ಅವರು 1972 ರಿಂದ 1980ರವರೆಗೆ ಮುಖ್ಯಮಂತ್ರಿಯಾಗಿದ್ದರು. ಹುಣಸೂರು ಕ್ಷೇತ್ರವನ್ನು ಪ್ರತಿನಿಧಿಸಿದ್ದರು. ಅಧಿಕಾರದಲ್ಲಿದ್ದಾಗ ಸಾಮಾಜಿಕ ನ್ಯಾಯದ ಪರವಾಗಿ, ಬಡವರ ಪರವಾಗಿ ಕೆಲಸ ಮಾಡಿದರು.

ಮಲ ಹೊರುವ ಪದ್ಧತಿ ನಿಲ್ಲಿಸಿ ಜೀತಪದ್ಧತಿಗೆ ಮಂಗಳ ಹಾಡಿದರು. ಭೂಸುಧಾರಣೆ ಯೋಜನೆ ಇಡೀ ಜಗತ್ತಿನಲ್ಲಿ ಹೆಸರಾಯಿತು. ಅದಕ್ಕಾಗಿ(2ನೇಪುಟಕ್ಕೆ)

## ದೇವರಾಜ ಅರಸ್ ಹಿಂದುಳಿದ ವರ್ಗಗಳ ಅಭಿವೃದ್ಧಿಯ ಹರಿಕಾರ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.20–** ಪಟ್ಟಣದ ತಹಸೀಲ್ದಾರ್ ಕಚೇರಿ ಆವರಣದಲ್ಲಿ ತಾಲೂಕು ಆಡಳಿತ ಹಾಗೂ ಹಿಂದೂಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ದಿ.ಡಿ.ದೇವರಾಜು ಅರಸು ರವರ 110 ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ತಹಸಿಲ್ದಾರ್ ಬೀಮರಾಯ ಬಿ.ರಾಮದುರ್ಗ ಮಾತನಾಡಿ, ರಾಜ್ಯದ ಮುಖ್ಯಮಂತ್ರಿಗಳಾಗಿ ದಿ.ಡಿ.ದೇವರಾಜು ಅರಸು ರವರು ಅನೇಕ ಸುದಾರಣೆಗಳನ್ನು ತರುವ ಮೂಲಕ ಹಿಂದುಳಿದ ವರ್ಗದವರು ಹಾಗೂ ಆರ್ಥಿಕವಾಗಿ ಅತ್ಯಂತ ದುರ್ಬಲ ವರ್ಗದವರಿಗಾಗಿ ಅನೇಕ ಯೋಜನೆಗಳನ್ನು ತರುವ ಮೂಲಕ ಹಿಂದುಳಿದ ವರ್ಗದವರ ಅಭಿವೃದ್ದಿಗೆ ಶ್ರಮಿಸಿದ್ದಾರೆ. ಅವರ ಕರ್ನಾಟಕ ಭೂಸೂದರಣೆ ಕಾಯ್ದೆಗಳು ಇಂದಿಗೂ ಕೂಡ ಕಂದಾಯ ಇಲಾಖೆಯಲ್ಲಿ ಜಾರಿಯಲ್ಲಿವೇ. ಇಂದು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ವಸತಿ ನಿಲಯದಲ್ಲಿ ಗುಣಮಟ್ಟದ ಶಿಕ್ಷಣವನ್ನು ಪಡೆಯುವುದಕ್ಕೆ ಹಾಗೂ ರೈತರು ಉಳುವವನ್ನೆ ಭೂಮಿಯ ಒಡೆಯ ಕಾಯ್ದೆಯ ಮೂಲಕ ಬಡವರು ಕೂಡ ಭೂಮಿಯ ಒಡೆಯರನ್ನಾಗಿ ಮಾಡಿದ್ದಾರೆ . ದಿ.ಡಿ.ದೇವರಾಜು ಅರಸು ರವರು ರಾಜ್ಯದ ಸುಧೀರ್ಘ ಅವಧಿಯ ಮುಖ್ಯಮಂತ್ರಿಗಳಾಗಿ ಸಮ ಸಮಾಜ ನಿರ್ಮಾಣವಾಗುವಲ್ಲಿ ಹೆಚ್ಚಿನ ಕೊಡುಗೆಯನ್ನು ನೀಡಿದ್ದಾರೆ ಎಂದು ತಿಳಿಸಿದರು. ಹಿರಿಯ ಮುಖಂಡರಾದ ಶಿವರಾಜ ನಾಯಕ ವಕೀಲರು ಮಾತನಾಡಿ,ರಾಜ್ಯದಲ್ಲಿ ಹಿಂದುಳಿದವರ ಸಬಲಿಕರಣಕ್ಕಾಗಿ ಎಲ್.ಜಿ.ಹಾವನೂರು ಅಯೋಗವನ್ನು ರಚಿಸುವ ಮೂಲಕ ರಾಜ್ಯದ ಹಿಂದುಳಿದ (2ನೇಪುಟಕ್ಕೆ)

## ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ: ಜಿಲ್ಲಾಧಿಕಾರಿ ನಿತೀಶ್ ಕೆ. ಮನವಿ

**ರಾಯಚೂರು,ಆ.20–**ಪ್ರತಿ ವರ್ಷದಂತೆ ಈ ಬಾರಿಯೂ ವರಸಿದ್ಧಿ ವಿನಾಯಕ ಗೌರಿ ಗಣೇಶ ಚತುರ್ಥಿ ಹಬ್ಬದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ನಿಂದ ಮಾಡಿದ ಬಣ್ಣದ ವಿಗ್ರಹಗಳನ್ನು ಸ್ಥಾಪಿಸದೇ, ಬಣ್ಣ ರಹಿತ ವಾದ ಮಣ್ಣಿನ ಗಣೇಶ ವಿಗ್ರಹಗಳನ್ನು ಪ್ರತಿಷ್ಠಾಪಿಸಿ, ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿಗಳಾ ದ ನಿತೀಶ್ ಕೆ. ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.



ಜಿಲ್ಲೆಯಲ್ಲಿ ಆಚರಿಸಲಾಗುತ್ತಿರುವ ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಗಣೇಶ ವಿಗ್ರಹಗಳ ತಯಾರು, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯಿಂದ ಪರಿಸರಕ್ಕೆ ಹಾನಿಯಾಗುವಂತಹ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ವಸ್ತುಗಳು ಮತ್ತು ಲೋಹ ಮಿಶ್ರಿತ (ಆಯಿಲ್ ಪೆಂಟ್) ಬಣ್ಣಗಳನ್ನು ಉಪಯೋಗಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆ ಉಂಟಾಗುತ್ತದೆ. ಆದ್ದರಿಂದ ಗಣೇಶನ ಮೂರ್ತಿಗಳ ವಿಸರ್ಜನೆ ಯಿಂದ ಕೆರೆ, ಬಾವಿ, ಕೊಳ, ನದಿಗಳಲ್ಲಿನ ನೀರು ಮಾಲಿನ್ಯವಾಗದಂತೆ ಮೇಲ್ವಿಚಾರಣೆ ವಹಿಸುವುದು ಅವಶ್ಯಕ ಹಾಗೂ ಇದಕ್ಕಾಗಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈ ಹಬ್ಬದ ಆಚರಣೆ ಸಮಯದಲ್ಲಿ ನೈಸರ್ಗಿಕ ಜಲ ಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ2016ರಲ್ಲಿ(2ನೇಪುಟಕ್ಕೆ)

## ಮೊದಲನೇಯ ಪುಟದಿಂದ

# ಪದಚ್ಯುತಿ ಮಸೂದೆ ಮಂಡನೆ

ಲೋಕಸಭೆಯಲ್ಲಿ ಕೇಂದ್ರ ಸರ್ಕಾರದ ಉದ್ದೇಶಿತ ಮಸೂದೆಗೆ ತೀವ್ರ ಆಕ್ಷೇಪ ಮತ್ತು ಅಸಮಾಧಾನ ವ್ಯಕ್ತವಾಗಿದ್ದು ಆಡಳಿತ ಮತ್ತು ಪ್ರತಿ ಪಕ್ಷಗಳ ನಡುವೆ ಆರೋಪ ಪ್ರತ್ಯಾರೋಪಕ್ಕೆ ವೇದಿಕೆಯಾಗಿದೆ.ಕಾಂಗ್ರೆಸ್ ಸಂಸದ ಕೆಸಿ ವೇಣುಗೋಪಾಲ್ ಪ್ರತಿಕ್ರಿಯೆ ನೀಡಿ ಕೇಂದ್ರ ಸರ್ಕಾರದ ಈ ಕ್ರಮ ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡುವ ಕ್ರಮ ಎಂದು ಹರಿಹಾಯ್ದಿದ್ದಾರೆ

ಸಂಸತ್ ಹೊರಭಾಗದಲ್ಲಿ ಮಾತನಾಡಿದ ಕಾಂಗ್ರೆಸ್ ಸಂಸದೆ ಪ್ರಿಯಾಂಕ ಗಾಂಧಿ, ಎಲ್ಲದಕ್ಕೂ ವಿರುದ್ಧವಾದ ಮಸೂದೆ, ಭ್ರಷ್ಟಾಚಾರ ವಿರೋಧಿ ಕ್ರಮ ಎಂದು ಹೇಳುವುದು ಜನರ ಕಣ್ಣುಗಳಿಗೆ ಮುಸುಕನ್ನು ಎಳೆಯುವಂತಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.ಮಸೂದೆಯನ್ನು ನೆಪವಾಗಿಟ್ಟುಕೊಂಡು ವಿರೋಧ ಪಕ್ಷಗಳ ರಾಜ್ಯಗಳ ಮುಖ್ಯಮಂತ್ರಿಯ ಮೇಲೆ ಯಾವುದೇ ರೀತಿಯ ಪ್ರಕರಣ ಹಾಕಬಹುದು, ಅವರನ್ನು 30 ದಿನಗಳವರೆಗೆ ಶಿಕ್ಷೆಯಿಲ್ಲದೆ ಬಂಧಿಸಬಹುದು ಮತ್ತು ಅವರು ಮುಖ್ಯಮಂತ್ರಿಯಾಗುವುದನ್ನು ತಡೆಯಬಹುದು ಎನ್ನುವ ಕೇಂದ್ರ ಸರ್ಕಾರದ ಕ್ರಮ ಸಂಪೂರ್ಣವಾಗಿ ಸಾಂವಿಧಾನಿಕ ವಿರೋಧಿ, ಪ್ರಜಾಪ್ರಭುತ್ವ ವಿರೋಧಿ ಮತ್ತು ಅತ್ಯಂತ ದುರದೃಷ್ಟಕರ ಎಂದಿದ್ದಾರೆ.

ಎಐಎಂಐಎಂ ನಾಯಕ ಹಾಗೂ ಸಂಸದ ಅಸಾದುದ್ದೀನ್ ಒವೈಸಿ ಪ್ರತಿಕ್ರಿಯಿಸಿ, ಕೇಂದ್ರ ಸರ್ಕಾರದ ಉದ್ದೇಶಿತ ಮಸೂದೆ ಕಾನೂನು ಮತ್ತು ಸಂವಿಧಾನ ಬಾಹೀರವಾದುದು ಪ್ರಧಾನಿಯನ್ನು ಯಾರು ಬಂಧಿಸುತ್ತಾರೆ ಎಂದು ಪ್ರಶ್ನಿಸುತ್ತಾರೆ.ಒಟ್ಟಾರೆಯಾಗಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಈ ಮಸೂದೆಗಳ ಮೂಲಕ ದೇಶವನ್ನು ಪೊಲೀಸ್ ರಾಜ್ಯವನ್ನಾಗಿ ಮಾಡಲು ಬಯಸುತ್ತದೆ. ಈ ಹಿನ್ನೆಲೆಯಲ್ಲಿ ಮಸೂದೆಯನ್ನು ತೀವ್ರವಾಗಿ ವಿರೋಧಿಸುತ್ತೇವೆ ಅಧಿಕಾರ ಶಾಶ್ವತವಲ್ಲ ಎಂಬುದನ್ನು ಬಿಜೆಪಿ ಮರೆಯುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.ಆರ್‌ಜೆಡಿ ನಾಯಕ ನಾಯಕ ಸುಧಾಕರ್ ಸಿಂಗ್ ಪ್ರತಿಕ್ರಿಯೆ ನೀಡಿ "ದೇಶ ಸರ್ವಾಧಿಕಾರದತ್ತ ಸಾಗಲು ಹೆಜ್ಜೆ ಹಾಕುತ್ತಿದೆ. ಯಾವುದೇ ವ್ಯಕ್ತಿ ಅಧಿಕಾರದ ಸ್ಥಾಪನೆಗಳನ್ನು ಪ್ರಶ್ನಿಸಿದರೆ, ಅಂತಹ ಜನರನ್ನು ರಾತ್ರೋರಾತ್ರಿ ಬಂಧಿಸಿ ಜೈಲಿಗೆ ಕಳುಹಿಸಲಾಗುತ್ತದೆ ಎಂದಿದ್ದಾರೆ.

ಭಾರತ ಪಾಕಿಸ್ತಾನ ಮತ್ತು ಬಾಂಗ್ಲಾದೇಶವಾಗುವ ಅಂಚಿನಲ್ಲಿದೆ, ಅಲ್ಲಿ ವಿರೋಧ ಪಕ್ಷದ ನಾಯಕರು ಜೈಲಿನಲ್ಲಿ ಅಥವಾ ವಿದೇಶದಲ್ಲಿದ್ದಾರೆ. ಭಾರತದೊಳಗೆ ಅದೇ ವಿಧಾನವನ್ನು ಅಳವಡಿಸಿಕೊಳ್ಳಲು ಪ್ರಯತ್ನಿಸಲಾಗುತ್ತಿದೆ, ಇದನ್ನು ವಿರೋಧಿಸಲಾಗುವುದು ಎಂದು ತಿಳಿಸಿದ್ದಾರೆ.ಕೇಂದ್ರ ಸರ್ಕಾರ ಪ್ರಕರಣ ದಾಖಲಿಸಿ ವಜಾಗೊಳಿಸುವುದಾಗಿ ಹೇಳುತ್ತಿದೆ. ಎಫ್‌ಐಆರ್ ದಾಖಲಿಸಿದರೆ, ಕೆಲವರು ರಾಜೀನಾಮೆ ನೀಡುತ್ತಾರೆ ಮತ್ತು ಕೆಲವರು ರಾಜೀನಾಮೆ ನೀಡುವುದಿಲ್ಲ, ಆದರೆ ಅವರನ್ನು ಶಿಕ್ಷಿಸುವ ಹಕ್ಕು ನಿಮಗೆ ಇಲ್ಲವೇ ಎಂದು ಪ್ರಶ್ನಿಸಿದ್ದಾರೆ. ಸಿಪಿಐ ಎಂ ಸಂಸದ ಅಮ್ರಾ ರಾಮ್ ಪ್ರತಿಕ್ರಿಯೆ ನೀಡಿ ಗಂಭೀರ ಕ್ರಿಮಿನಲ್ ಆರೋಪಗಳ ಮೇಲೆ ಬಂಧಿಸಲ್ಪಟ್ಟ ಪ್ರಧಾನಿ, ಮುಖ್ಯಮಂತ್ರಿಗಳು ಮತ್ತು ಸಚಿವರನ್ನು ಪದಚ್ಯುತಗೊಳಿಸುವ ಮಸೂದೆ 30 ದಿನಗಳ ಶಿಕ್ಷೆ ಆಧರಿಸಿದ್ದರೆ, ಎಲ್ಲರನ್ನೂ ಪದಚ್ಯುತಗೊಳಿಸಲಾಗುತ್ತದೆ. 30 ದಿನಗಳ ಶಿಕ್ಷೆ ದೊಡ್ಡ ಅಪರಾಧವಲ್ಲ ಎಂದಿದ್ದಾರೆ.

**ರಾಜ್ಯ ಸರ್ಕಾರ ಪತನಕ್ಕೆ ಹೊಸ ಮಸೂದೆ:ಟಿಎಂಸಿ**

ವಿರೋಧಪಕ್ಷಗಳು ಅಧಿಕಾರದಲ್ಲಿರುವ ರಾಜ್ಯ ಸರ್ಕಾರಗಳನ್ನು ಉರುಳಿಸಲು ಕೇಂದ್ರ ಸರ್ಕಾರ ಹೊಸ ಮಸೂದೆ ತರುತ್ತಿದೆ' ಎಂದು ತೃಣಮೂಲ ಕಾಂಗ್ರೆಸ್ ಸಂಸದರು ಕೇಂದ್ರದ ವಿರುದ್ಧ ಹರಿಹಾಯ್ದಿದ್ದಾರೆ.ಕನಿಷ್ಠ 5 ವರ್ಷಗಳ ಜೈಲು ಶಿಕ್ಷೆಗೆ ಗುರಿಯಾಗುವಂಥ ಯಾವುದೇ ಗಂಭೀರ ಕ್ರಿಮಿನಲ್ ಆರೋಪದಲ್ಲಿ ಬಂಧಿತರಾಗಿ 30 ದಿನಗಳ ಕಾಲ ಜೈಲಿನಲ್ಲಿದ್ದರೆ ಅಂಥವರ ಅಧಿಕಾರ 31ನೇ ದಿನ ರದ್ದಾಗಲಿದೆ ಎಂಬುದು ಈ ಮಸೂದೆಯ ವಿಶೇಷ. ಪ್ರಧಾನಿ, ಮುಖ್ಯಮಂತ್ರಿ ಇಲ್ಲವೆ ಸಚಿವರು ಗಂಭೀರ ಆರೋಪ ಹೊತ್ತು ಸತತ 30 ದಿನ ಬಂಧನದಲ್ಲಿದ್ದರೆ ಅವರನ್ನು ಪದಚ್ಯುತಗೊಳಿಸಲು ಅವಕಾಶ ಕಲ್ಪಿಸುವ ಮಸೂದೆಯನ್ನು ಕೇಂದ್ರ ಸರ್ಕಾರ ಮಂಡಿಸಲು ಮುಂದಾಗಿರುವ ಹಿನ್ನೆಲೆಯಲ್ಲಿ ಈ ಪ್ರತಿಕ್ರಿಯೆ ನೀಡಿದೆ.

ರಾಜ್ಯಸಭೆಯ ಟಿಎಂಸಿ ಸಂಸದ ಸಾಕೇತ್ ಗೋಖಲೆ, 'ರಾಜ್ಯ ಸರ್ಕಾರಗಳನ್ನು ಉರುಳಿಸಲು ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಹೊಸ ತಂತ್ರವನ್ನು ರೂಪಿಸಿದ್ದಾರೆ' ಎಂದು ಆರೋಪಿಸಿದ್ದಾರೆ.ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ವಿಷಯ ಹಂಚಿಕೊಂಡಿರುವ ಅವರು, 'ಮತಗಳವು ಹಗರಣ ಬಯಲಿಗೆ ಬರುತ್ತಿದ್ದಂತೆ, ಮೋದಿ ಮತ್ತು ಶಾ ಜೋಡಿ ಹೊಸ ತಂತ್ರ ಹೂಡಿದೆ. ರಾಜ್ಯ ಸರ್ಕಾರಗಳನ್ನು ಉರುಳಿಸಲು ಸಿಬಿಐ ಮತ್ತು ಇಡಿಗೆ ಅವಕಾಶ ಕಲ್ಪಿಸುತ್ತಿದೆ' ಎಂದು ಆರೋಪಿಸಿದ್ದಾರೆ.ಯಾವುದೇ ವ್ಯಕ್ತಿ ಶಿಕ್ಷೆಗೆ ಗುರಿಯಾದಾಗ ಮಾತ್ರ ಆತ ಅಪರಾಧಿ ಎಂದು ಪರಿಗಣಿಸಲಾಗುತ್ತದೆ. ಅಲ್ಲಿಯವರೆಗೂ ಅವರೊಬ್ಬ 'ಆರೋಪಿ'ಯಷ್ಟೇ. ಕೇವಲ ಆರೋಪದ ಆಧಾರದಲ್ಲಿ ಮುಖ್ಯಮಂತ್ರಿ ಅಥವಾ ಮಂತ್ರಿಗಳನ್ನು ಹುದ್ದೆಯಿಂದ ತೆಗೆಯಲಾಗದು. ಮೋದಿ-ಶಾ ಅವರ ಕೇಂದ್ರೀಯ ಏಜೆನ್ಸಿಗಳು ಬಂಧಿಸಿದರೆ ಮಾತ್ರ ಅದು ತಪ್ಪೆಸಗಿರುವುದಕ್ಕೆ ಪುರಾವೆಯಲ್ಲ' ಎಂದಿದ್ದಾರೆ.'ಆಸಕ್ತಿಕರ ವಿಷಯವೆಂದರೆ ಕಳೆದ 11 ವರ್ಷಗಳಲ್ಲಿ ಕೇಂದ್ರ ಮತ್ತು ಬಿಜೆಪಿ ಆಡಳಿತವಿರುವ ಯಾವುದೇ ರಾಜ್ಯಗಳಲ್ಲಿ ಆಡಳಿತ ಪಕ್ಷದವರ ಒಬ್ಬರ ಬಂಧನವೂ ಆಗಿಲ್ಲ. ಉಳಿದೆಲ್ಲವೂ ವಿರೋಧ ಪಕ್ಷಗಳಿರುವ ರಾಜ್ಯಗಳಲ್ಲೇ ನಡೆದಿದೆ' ಎಂದು ಆರೋಪಿಸಿದ್ದಾರೆ

# ಡಿ.ದೇವರಾಜ ಅರಸು ಅವರ ವಿಚಾರಧಾರೆಗಳನ್ನು ಯುವಪೀಳಿಗೆ ಅನುಸರಿಸಬೇಕು: ಶಿವಾನಂದ

ನಾವು ಅರಸು ಅವರನ್ನು ಸಾಮಾಜಿಕ ನ್ಯಾಯ ಹರಿಕಾರರೆಂದು ಕರೆಯುತ್ತೇವೆ ಎಂದರು.

ಅರಸು ಭಾವಚಿತ್ರ ಮೆರವಣಿಗೆ: ಹಿಂದುಳಿದ ವರ್ಗಗಳ ಧೀಮಂತ ನಾಯಕ, ಪರಿವರ್ತನೆಯ ಹರಿಕಾರ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಅಂಗವಾಗಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಅರಸು ಅವರ ಭಾವಚಿತ್ರ ಮೆರವಣಿಗೆ ಅದ್ದೂರಿಯಾಗಿ ನಡೆಯಿತು. ಮೆರವಣಿಗೆಯಲ್ಲಿ ವಿವಿಧ ಮುಖಂಡರು ಭಾಗಿಯಾಗಿದ್ದರು.

ಸಾಧಕರು, ವಿದ್ಯಾರ್ಥಿಗಳಿಗೆ ಸನ್ಮಾನ: ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಅಂಗವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ವಿವಿಧ ವಸತಿ ನಿಲಯ ಹಾಗೂ ವಸತಿ ಶಾಲೆಯ ವಿದ್ಯಾರ್ಥಿಗಳು ಹತ್ತನೇ ತಗರತಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ವಿವಿಧ ಗಣ್ಯರು ಸನ್ಮಾನಿಸಿ, ಗೌರವಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಪೊಲೀಸ್ ಇಲಾಖೆಯ ಎರಡನೇಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಕಾಂಬಳೆ, ಹಿಂದುಳಿದ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಕೆ.ಶಾಂತಪ್ಪ ಸೇರಿದಂತೆ ವಿವಿಧ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿದ್ದರು.

ಅರಸು ಅವರು ರಾಜ್ಯ ಕಂಡ ಶ್ರೇಷ್ಠ ಸಮಾಜ ಸುಧಾರಕ: ಎನ್.ಎಸ್.ಭೋಸರಾಜು

ರಾಯಚೂರು ಆಗಸ್ಟ್ 19 (ಕ.ವಾ.): ಜನಪರ ನಾಯಕ, ಸಾಮಾಜಿಕ ನ್ಯಾಯದ ಹರಿಕಾರ, ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಡಿ.ದೇವರಾಜ್ ಅರಸು ಅವರು ರಾಜ್ಯ ಕಂಡ ಶ್ರೇಷ್ಠ ಸಮಾಜ ಸುಧಾರಕರಲ್ಲಿ ಒಬ್ಬರು. ಅವರ ಉಳುವವನಿಗೆ ಭೂಮಿ, ಹಾವನೂರು ಆಯೋಗದಂತಹ ಅವರ ಪ್ರಮುಖ ನಿರ್ಧಾರಗಳ ಪ್ರತಿಫಲ ಇಂದಿನ ಪೀಳಿಗೆಗೆ ಸಿಗುತ್ತಿದೆ. ಮತ್ತು ಅವರ ಅಧಿಕಾರಾವಧಿಯಲ್ಲಿ ಕರ್ನಾಟಕದ ಶೋಷಿತ ವರ್ಗಗಳಾದ ಪರಿಶಿಷ್ಟ ಜಾತಿಗಳು ಮತ್ತು ಇತರ ಹಿಂದುಳಿದ ಜಾತಿಗಳನ್ನು ಗುರಿಯಾಗಿರಿಸಿಕೊಂಡು ಮಾಡಿದ ಸುಧಾರಣೆಗಳು ಸ್ಮರಣೀಯವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಸಂದೇಶ ಕಳುಹಿಸಿದ್ದಾರೆ.ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆ ಕಾರ್ಯಕ್ರಮಕ್ಕೆ ಆಹ್ವಾನಿಸಿದ್ದಕ್ಕೆ ಹೃದಯಪೂರ್ವಕ ಕೃತಜ್ಞತೆಗಳು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ನಾನು ಉತ್ಸುಕನಾಗಿದ್ದೇ ಆದರೆ ಬೆಂಗಳೂರಿನಲ್ಲಿ ನಡೆಯುತ್ತಿರುವ ಕಾರ್ಯಕಲಾಪಗಳಲ್ಲಿ ಅಧಿವೇಶನದ ವಿಧಾನ ಪರಿಷತ್ತಿನ ಸಭಾನಾಯಕರಾಗಿ ಭಾಗವಹಿಸುತ್ತಿರುವುದರಿಂದ ಈ ಕಾರ್ಯಕ್ರಮಕ್ಕೆ ಹಾಜರಾಗದಿರಲು ವಿಷಾಧಿಸುತ್ತೇನೆ ಎಂದು ಹೇಳುತ್ತ, ಈ ಕಾರ್ಯಕ್ರಮ ಯಶಸ್ವಿಯಾಗಲೆಂದು ಶುಭ ಹಾರೈಸುತ್ತೇನೆ ಎಂದು ಸಚಿವರಾದ ಎನ್.ಎಸ್.ಬೋಸರಾಜು ಅವರು ತಮ್ಮ ಸಂದೇಶ ಪತ್ರದಲ್ಲಿ ತಿಳಿಸಿದ್ದಾರೆ.

# ವಸತಿ ನಿಲಯಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಆಗ್ರಹಿಸಿ ಎಸ್‌ಎಫ್‌ಐ ಪ್ರತಿಭಟನೆ

ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಸೌಲಭ್ಯವನ್ನು ಒದಗಿಸಿ, ಸೂಕ್ತ ರಕ್ಷಣೆ ನೀಡಿ ಅಭ್ಯಾಸಕ್ಕೆ ಪೂರಕವಾದ ವಾತವರಣ ನಿರ್ಮಾಣ ಮಾಡಬೇಕು. ಒಂದು ವೇಳೆ ನಿರ್ಲಕ್ಷ್ಯ ತೋರಿದರೆ ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟ ರಾಜ್ಯ ಮಟ್ಟದವರೆಗೆ ಹೋರಾಟ ವಿಸ್ತರಣೆ ಮಾಡಬೇಕು ಆಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನಾ ಸ್ಥಳಕ್ಕೆ ತಾಲೂಕು ಅಧಿಕಾರಿ ರಾಜಕುಮಾರ್ ಆಗಮಿಸಿ ಮನವಿ ಪತ್ರ ಸ್ವೀಕರಿಸಿ ಬಳಿಕ ವಾರ್ಡನ್ ಮತ್ತು ಅಡುಗೆ ಸಿಬ್ಬಂದಿಗಳ ಕ್ರಮ ಕೈಗೊಳ್ಳಲಾಗುವುದು ಜಿಲ್ಲಾಧಿಕಾರಿಗಳಿಗೆ ಪತ್ರ ಬರ್ತೇನೆ ಎಂದು ಹೇಳಿದ ಬಳಿಕ ಪ್ರತಿಭಟನೆ ವಾಪಸ್ ಪಡೆದರು,

ಇದೆ ಸಂದರ್ಭದಲ್ಲಿ ತಾಲೂಕು ಮುಖಂಡರಾದ ಬಾಬು, ಭಾಷಾ, ಸಂತೋಷ ತ್ಯಾಪ್ಲಿ. ರಮೇಶ್ ಕಮಲದಿನ್ನಿ, ಪಕಿರಣ್ಣ , ರಂಗನಾಥ, ರಮೇಶ್. ರಾಜು. ರವಿವರ್ಮ, ಪ್ರಜವಾಲ್ ,ವಿದ್ಯಾರ್ಥಿಗಳಾದ ಅಂಕಿತಾ , ಲಕ್ಷ್ಮಿ , ಮಲ್ಲಿಕಾ, ಮೀನಾಕ್ಷಿ, ಮತ್ತು ಇತರರು ಇದ್ದರು

# ಸತ್ಯವತಿ ದೇಶಪಾಂಡೆ ಅವರ ಸಂಗೀತ ಸುಧೆಗೆ ಭಕ್ತರು, ಶ್ರೀಗಳು ಮಂತ್ರಮುಗ್ಧ

**ಯುವ ಮಾರ್ಗ ಸುದ್ದಿ**



**ರಾಯಚೂರು,ಆ.20**-ಇಲ್ಲಿನ ಸೋಮವಾರಪೇಟೆ ಹಿರೇಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ನಡೆಯುತ್ತಿರುವ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ, ಉದಯೋನ್ಮುಖ ಗಾಯಕಿ ಸತ್ಯವತಿ ದೇಶಪಾಂಡೆ ಅವರು ತಮ್ಮ ಮಧುರ ಸಂಗೀತದಿಂದ ಎಲ್ಲರ ಗಮನ ಸೆಳೆದರು. ರಾಯಚೂರಿನ ಶ್ರೀ ವೆಂಕಟೇಶ್ವರ ಸಂಗೀತ ಪಾಠಶಾಲೆಯ ಸಂಸ್ಥಾಪನಾ ಅಧ್ಯಕ್ಷರಾದ ಸತ್ಯವತಿ ಅವರು ಪ್ರಸ್ತುತಪಡಿಸಿದ ಸುಗಮ ಸಂಗೀತಕ್ಕೆ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಅಭಿನವ ರಾಚೋಟಿ ವೀರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ದೇವದುರ್ಗಾ ಶಿಖರಮಠದ ಪೂಜ್ಯಶ್ರೀ ಕಪಿಲ ಸಿದ್ಧರಾಮ ಶಿವಾಚಾರ್ಯ ಮಹಾಸ್ವಾಮಿಗಳು ಭಕ್ತಿಪೂರ್ವಕವಾಗಿ ಮೆಚ್ಚುಗೆ ಸೂಚಿಸಿದರು.

ಪುರಾಣ ಪ್ರವಚನದ ಮಧ್ಯದಲ್ಲಿ ನಡೆದ ಈ ಸಂಗೀತ ಸಂಭ್ರಮ ಕಾರ್ಯಕ್ರಮದಲ್ಲಿ ಸತ್ಯವತಿ ದೇಶಪಾಂಡೆ ಅವರು ತಮ್ಮ ಕಂಠಸಿರಿಯಿಂದ ಗೀತೆಗಳನ್ನು ಹಾಡಿ ಶ್ರೀಗಳು ಮತ್ತು ನೆರೆದಿದ್ದ ಭಕ್ತರನ್ನು ಮಂತ್ರಮುಗ್ಧರನ್ನಾಗಿಸಿದರು. ಅವರಿಗೆ ಹಾರ್ಮೊನಿಯಂನಲ್ಲಿ ಹನುಮಂತ್ರಾಯ ಚಿಕ್ಕ ಕೊಟ್ನೇಕಲ್ ಹಾಗೂ ತಬಲಾದಲ್ಲಿ ಶಂಕ್ರಯ್ಯ ಮಟಮಾರಿ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ರಾಯಚೂರು ಜಿಲ್ಲೆಯು ಕಲಾವಿದರ ತವರುಮನೆ ಎಂಬ ಮಾತಿಗೆ ಸತ್ಯವತಿ ದೇಶಪಾಂಡೆ ಅವರು ನಿಜವಾದ ಸಾಕ್ಷಿಯಾಗಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಇಂದಿನ ಮೊಬೈಲ್ ಹಾವಳಿಯ ಕಾಲದಲ್ಲಿಯೂ ಅವರು ತಮ್ಮ ಪುತ್ರಿಯೊಂದಿಗೆ ಮಕ್ಕಳಿಗೆ ಸಂಗೀತ ಜ್ಞಾನ ನೀಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು. ಶ್ರೀತಿರುಮಲ ತಿರುಪತಿ ವೆಂಕ ಟೇಶ್ವರ ಸ್ವಾಮಿ ನಾಮಾಂಕಿತದ ಈ ಸಂಗೀತ ಪಾಠಶಾಲೆ ತೆಂಗಿನ ಮರದಂತೆ ಬೆಳೆದು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ರಾಯಚೂರಿನ ಕೀರ್ತಿಯನ್ನು ಹೆಚ್ಚಿಸಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಶ್ರೀಮಠ ಶಾಸ್ತ್ರಿಗಳಾದ ಶಿವಯ್ಯ ಸ್ವಾಮಿ, ಪತ್ರಕರ್ತರಾದ ಪಿಕಳಿಹಾಳ ಅಯ್ಯಪ್ಪ ಸ್ವಾಮಿ ಹಿರೇಮಠ, ವೆಂಕಟಾಪೂರ ಷಣ್ಮುಕಪ್ಪ, ಅಂತರಗಂಗಿ ವೀರಭದ್ರಪ್ಪ, ಗದ್ವಾಲ ನರಸಣ್ಣ, ಎ.ಎಸ್. ಪಾಟೀಲ, ವಿಶ್ವನಾಥ ಸೌದ್ರಿ, ಸೋಡಾ ಪಂಪಣ್ಣ ಸಾಹುಕಾರ, ನಾಗರಾಜ ಕುರ್ಡಿ, ರಾಚಯ್ಯ ಸ್ವಾಮಿ ನಂದಿಕೋಲಮಠ ಸೇರಿದಂತೆ ಹಲವು ಗಣ್ಯರು ಹಾಗೂ ಸದ್ಭಕ್ತರು ಉಪಸ್ಥಿತರಿದ್ದರು.

# ಸೊಳ್ಳೆ ಉತ್ಪತ್ತಿ ತಡೆಯೋಣ: ಡಾ.ಸುರೇಂದ್ರಬಾಬು ಸಲಹೆ

**ಯುವ ಮಾರ್ಗ ಸುದ್ದಿ**



**ರಾಯಚೂರು,ಆ.20**-ಸೊಳ್ಳೆಯು ನೋಡಲು ಗಾತ್ರದಲ್ಲಿ ಅತ್ಯಂತ ಚಿಕ್ಕದಾದರೂ ಸೋಂಕಿತ ಸೊಳ್ಳೆಯು ಕಚ್ಚಿದಾಗ ಹರಡುವ ರೋಗಗಳು ಗಂಭೀರವಾಗಿರುತ್ತವೆ. ಮಲೇರಿಯಾ, ಡೆಂಗೆ ಮತ್ತು ಮೆದುಳುಜ್ವರ ಮಾರಣಾಂತಿಕವಾಗಿದ್ದು ಸಮುದಾಯವು ಈ ದಿಶೆಯಲ್ಲಿ ರೋಗ ನಿಯಂತ್ರಣಕ್ಕೆ ಕೈಜೋಡಿಸಿ ಜಿಲ್ಲೆಯನ್ನು ಮಾದರಿಯಾಗಿಸೋಣ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಸುರೇಂದ್ರಬಾಬು ಅವರು ಹೇಳಿದರು.

ಬುಧವಾರ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ

ವಿಶ್ವ ಸೊಳ್ಳೆ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮಲೇರಿಯಾ ರೋಗವು ಅನಾಫಿಲಿಸ್ ಹೆಣ್ಣು ಸೊಳ್ಳೆಯ ಕಚ್ಚುವಿಕೆಯಿಂದ ಹರಡುತ್ತದೆ ಎಂದು ಸರ್. ರೋನಾಲ್ಡ್ ರಾಸ್ ಅವರು ಪತ್ತೆ ಹಚ್ಚಿದ ಸ್ಮರಣಾರ್ಥ ಜಗತ್ತಿನ ಎಲ್ಲ ದೇಶಗಳಲ್ಲಿ ಈ ದಿನಾಚರಣೆ ನಡೆಯುತ್ತಿದೆ.

ಹಲವು ವರ್ಷಗಳ ಹಿಂದೆ ಹೆಚ್ಚು ಮಲೇರಿಯಾ ಪ್ರಕರಣಗಳು ವರದಿಯಾಗುತ್ತಿದ್ದು, ಈಗ ಜಿಲ್ಲೆಯಲ್ಲಿ ಗಣನೀಯವಾಗಿ ಕಡಿಮೆಯಾಗಿವೆ.

ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ಮಲೇರಿಯಾ, ಡೆಂಗೆ, ಚಿಕೂನ್‌ಗುನ್ಯಾ, ಆನೆಕಾಲು, ಮೆದುಳು ಜ್ವರ ಮುಂತಾದ ರೋಗಗಳ ಅಪಾಯ ಹಾಗೂ ತಡೆಯ ಕ್ರಮಗಳ ಕುರಿತು ರಾಯಚೂರು ಜಿಲ್ಲೆಯಾದ್ಯಂತ ತಮ್ಮ ತಮ್ಮ ಗ್ರಾಮ, ನಗರ, ಪಟ್ಟಣಗಳ ವಾರ್ಡಗಳಲ್ಲಿ ಸಮುದಾಯದ ಸಹಭಾಗಿತ್ವದೊಂದಿಗೆ ನಿಯಂತ್ರಣ ಮಾಡೋಣವೆಂದರು.

ಈ ವೇಳೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಿಗಳ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ ಸ್ವಾಮಿ ಅವರು ಮಾತನಾಡಿ, ಈಗಾಗಲೆ ಜಿಲ್ಲೆಯಲ್ಲಿ ಸೊಳ್ಳೆಗಳ ಉತ್ಪತ್ತಿ ತಾಣಗಳ ನಿಯಂತ್ರಣಕ್ಕಾಗಿ ಮನೆಯ ಸುತ್ತಲು ನೀರು ನಿಲ್ಲದಂತೆ, ಹಳೆಯ ಟೈಯರ್, ಟಿನ್, ಬಕೇಟ್, ಕಲ್ಲಿನಡೋಣಿ, ಸಿಮೆಂಟ್ ತೊಟ್ಟಿ, ಹೂವಿನ ಕುಂಡಲ ಇತ್ಯಾದಿಗಳಲ್ಲಿ ನೀರು ಜಮಾವಣೆಯಾಗದಂತೆ ಎಚ್ಚರಿಕೆ ವಹಿಸಬೇಕು. ಬಳಸಲಾರದ ನೀರು ಸಂಗ್ರಹ ಸ್ಥಳಗಳಲ್ಲಿ ಸುಟ್ಟ ಎಣ್ಣೆ ಹಾಕುವುದು, ಬಳಸುವ ನೀರಿಗೆ ಸರಿಯಾಗಿ ಮುಚ್ಚಳ ಮುಚ್ಚುವುದು ಅಥವಾ ಬಟ್ಟೆ ಕಟ್ಟುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಲು ಮಲಗುವಾಗ ಸೊಳ್ಳೆ ಪರದೆ ಬಳಸುವುದು, ಮನೆಯಲ್ಲಿ ಸೊಳ್ಳೆ ಬತ್ತಿ, ರಿಪೆಲೆಂಟ್ ಬಳಸುವುದು, ಕಿಟಕಿ ಬಾಗಿಲಿಗೆ ಜಾಲರಿ ಅಳವಡಿಸುವುದು, ಸಾರ್ವಜನಿಕ ಸ್ಥಳದಲ್ಲಿ ಸ್ವಚ್ಛತೆ ಕಾಪಾಡುವ ಕುರಿತು ಮನೆ ಭೇಟಿ, ಗುಂಪು ಸಭೆ, ಶಾಲಾ ಮಕ್ಕಳಿಗೆ ಜಾಗೃತಿ, ಮೈಕಿಂಗ್ ನಂತಹ ಚಟುವಟಿಕೆಗಳೊಂದಿಗೆ ಬಿತ್ತಿಪತ್ರ, ಕರಪತ್ರಗಳನ್ನು ಬಳಸಿ ಜಾಗೃತಿ ನೀಡಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಮಾನಸಿಕ ತಜ್ಞರಾದ ಡಾ.ಮನೋಹರ ಪತ್ತಾರ, ಸಹಾಯಕ ಆಡಳಿತ ಅಧಿಕಾರಿ ಶಹಜಾನ್, ಜಿಲ್ಲಾ ದೈಹಿಕ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಕೀಟ ಶಾಸ್ತ್ರಜ್ಞೆ ಗಂಗೋತ್ರಿ, ಉಪಜಿಲ್ಲಾ ಆರೋಗ್ಯಶಿಕ್ಷಣಾಧಿಕಾರಿ ಬಸಯ್ಯ, ಕಚೇರಿ ಅಧಿಕ್ಷಕರಾದ ಕೃಷ್ಣಮೂರ್ತಿ, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ತಾಯಪ್ಪ ಸೇರಿದಂತೆ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ:

ಅಧಿಸೂಚನೆ ಹೊರಡಿಸಿದೆ. ನಿರಹಾಗೂ ದಿನಾಂಕ: 15.07.2025 ರಂದು ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆ ಕುರಿತು ಸುತ್ತೋಲೆ ಹೊರಡಿಸಲಾಗಿದ್ದು, ಜಿಲ್ಲೆಯ ನಗರ, ಪಟ್ಟಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಗಣೇಶ ಹಬ್ಬದ ಸಂದರ್ಭದಲ್ಲಿ ಅಂತಹ ಪ್ರಕರಣಗಳು ಕಂಡುಬಂದಲ್ಲಿ ಕ್ರಮವಹಿಸಲು ನಗರ, ಪಟ್ಟಣ ಸ್ಥಳೀಯ ಸಂಸ್ಥೆವಾರು ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳ ನೇತೃತ್ವದಲ್ಲಿ ಸ್ಕ್ವಾಡ್‌ಗಳ ತಂಡವನ್ನು ರಚಿಸಲು ಆದೇಶಿಸಿ ಕ್ರಮವಹಿಸಲಾಗಿದೆ. ಆದ್ದರಿಂದ ಸಾರ್ವಜನಿಕರು ಶಾಂತಿಯುತ ಹಬ್ಬದ ಆಚರಣೆಗೆ ಸಹಕರಿಸಬೇಕು ಎಂದು ರಾಯಚೂರ ಜಿಲ್ಲೆಯ ಸಾರ್ವಜನಿಕರಲ್ಲಿ ಕೋರಿದ್ದಾರೆ.

# ದೇವರಾಜ ಅರಸ್ ಹಿಂದುಳಿದ ವರ್ಗಗಳ ಅಭಿವೃದ್ಧಿಯ ಹರಿಕಾರ

ವರ್ಗಗಳನ್ನು ಗುರುತಿಸಿ ಕೇಂದ್ರಕ್ಕೆ ಶಿಪಾರಸ್ಸು ಮಾಡುವ ಮೂಲಕ ಹಿಂದುಳಿದ ಸಮುದಾಯಗಳಿಗೆ ಸರ್ಕಾರದ ಸೌಲಭ್ಯಗಳು ದೊರೆಯವಂತೆ ಮಾಡಿದ್ದರೆ ಎಂದು ತಿಳಿಸಿದರು.ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಸುರೇಶ ರವರು ದಿ.ಡಿ.ದೇವರಾಜು ಅರಸು ರವರ ಕುರಿತು ವಿಶೇಷ ಉಪನ್ಯಾಸವನ್ನು ನೀಡಿದರು.ಕಾರ್ಯಕ್ರಮದಲ್ಲಿ ತಾಲೂಕಿನ ವಿವಿಧ ಇಲಾಖೆಯಲ್ಲಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಉತ್ತಮವಾದ ಸೇವೆ ಸಲ್ಲಿಸಿದವರನ್ನು ತಾಲೂಕು ಆಡಳಿತ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ನೀಡಲಾಯಿತು.ಪಟ್ಟಣದ ಬಸವವೃತ್ತದಿಂದ ತಹಸೀಲ್ದಾರ್ ಕಚೇರಿಯವರೆಗೂ ದಿ.ಡಿ.ದೇವರಾಜು ಅರಸು ರವರ ಭಾವಚಿತ್ರ ಮೆರವಣಿಗೆ ನಡೆಸಲಾಯಿತು.ತಾ.ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ, ಸರ್ಕಾರಿ ನೌಕರರ ಸಂಘದ ತಾ.ಅಧ್ಯಕ್ಷರಾದ ಸುರೇಶಕುರ್ಡಿ , ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ, ಕುಡಿಯುವ ನೀರು ನೈರ್ಮಲ್ಯ ಇಲಾಖೆಯ ಅಧಿಕಾರಿ ಸುರೇಶ , ಬಿ.ಸಿ.ಎಂ. ಇಲಾಖೆಯ ತಾಲೂಕು ನಿದೇಶಕರಾದ ಬಾಗಯ್ಯನಾಯಕ, ಅಗ್ನಿಶಾಮಕ ಠಾಣಾಧಿಕಾರಿ ರಂಗಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಚರ್ಚ್, ಮಸೀದಿ ತಂಟೆಗೆ ಹೋಗದ ಸರ್ಕಾರ ದೇವಾಲಯ ವಿಚಾರಕ್ಕೂ ಬರಬಾರದು : ರಾಮಭದ್ರಾಚಾರ್ಯ



**ಮಥುರಾ, ಆ.20–** ಖ್ಯಾತ ರಾಮಕಥಾ ನಿರೂಪಕ ಮತ್ತು ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತ ಜಗದ್ಗುರು ರಾಮಭದ್ರಾಚಾರ್ಯ ಅವರು ವೃಂದಾವನದ ಠಾಕೂರ್ ಬಂಕೆ ಬಿಹಾರಿ ದೇವಾಲಯದ ನಿಯಂತ್ರಣವನ್ನು ತೆಗೆದುಕೊಳ್ಳುವ ಉತ್ತರ ಪ್ರದೇಶ ಸರ್ಕಾರದ ಕ್ರಮವನ್ನು ಪ್ರಶ್ನಿಸಿ, ಮಸೀದಿಗಳು ಮತ್ತು ಚರ್ಚ್‌ಗಳ ವಿರುದ್ಧ ಕ್ರಮ ಕೈಗೊಳ್ಳಲು ಸಾಧ್ಯವಾಗದಿದ್ದರೆ ದೇವಾಲಯಗಳನ್ನು ಅಂತಹ ಕ್ರಮಗಳಿಂದ ರಕ್ಷಿಸಬೇಕು ಎಂದು ಕೇಳಿಕೊಂಡಿದ್ದಾರೆ.

ದೇವಾಲಯಕ್ಕಾಗಿ ಟ್ರಸ್ಟ್ ಸ್ಥಾಪಿಸುವ ಮತ್ತು ಬಂಕೆ ಬಿಹಾರಿ ಕಾರಿಡಾರ್ ಅನ್ನು ಅಭಿವೃದ್ಧಿಪಡಿಸುವ ರಾಜ್ಯ ಸರ್ಕಾರದ ಯೋಜನೆಗೆ ಅವರು ತೀವ್ರ ಅಸಮ್ಮತಿ ವ್ಯಕ್ತಪಡಿಸಿದರು. ದೇವಾಲಯಕ್ಕಾಗಿ ಟ್ರಸ್ಟ್ ರಚಿಸುವ ಸರ್ಕಾರದ ನಿರ್ಧಾರವನ್ನು ನಾನು ಒಪ್ಪುವುದಿಲ್ಲ ಎಂದು ರಾಮಭದ್ರಾಚಾರ್ಯ ವೃಂದಾವನದ ತುಳಸಿ ಪೀಠ ಛತ್ತೀಸ್‌ಗಢ ಕುಂಜ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಅಲ್ಲಿ ಅವರು ವಾರಪೂರ್ತಿ ಶ್ರೀಮದ್ ಭಾಗವತ ಕಥಾ ಪಠಣವನ್ನು ನಡೆಸುತ್ತಿದ್ದರು.ಸರ್ಕಾರವು ಯಾವುದೇ ಮಸೀದಿ ಅಥವಾ ಚರ್ಚ್ ಅನ್ನು ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಾಗದಿದ್ದಾಗ ದೇವಾಲಯಗಳನ್ನು ತನ್ನ ನಿಯಂತ್ರಣಕ್ಕೆ ತರಲು ಮತ್ತು ಅವುಗಳ ಹಣವನ್ನು ವಶಪಡಿಸಿಕೊಳ್ಳಲು ಏಕೆ ಬಯಸುತ್ತದೆ ಎಂದು ನನಗೆ ಅರ್ಥವಾಗುತ್ತಿಲ್ಲ ಎಂದು ಅವರು ಹೇಳಿದರು.

ದೇವಾಲಯಕ್ಕೆ ಭೇಟಿ ನೀಡುವ ಲಕ್ಷಾಂತರ ಭಕ್ತರಿಗೆ ಉತ್ತಮ ಸೌಲಭ್ಯಗಳ ಅಗತ್ಯವನ್ನು ಉತ್ತರ ಪ್ರದೇಶ ಸರ್ಕಾರವು ಸುಗ್ರೀವಾಜ್ಞೆಯ ಮೂಲಕ ಟ್ರಸ್ಟ್ ಸ್ಥಾಪಿಸಲು ಮತ್ತು ಕಾರಿಡಾರ್ ನಿರ್ಮಿಸಲು ಕಾರಣವೆಂದು ಉಲ್ಲೇಖಿಸಿದೆ.

## ಮಳೆಯಿಂದ ಬೆಳೆ ಹಾನಿ ಜಂಟಿ ಸಮೀಕ್ಷೆ: ಚೆಲುವ

**ಬೆಂಗಳೂರು, ಆ. 20–** ರಾಜ್ಯದಲ್ಲಿ ಮಳೆಯಿಂದ ಹಾಳಾಗಿರುವ ಬೆಳೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕೃಷಿ ಮತ್ತು ಕಂದಾಯ ಇಲಾಖೆಯಿಂದ ಜಂಟಿ ಸಮೀಕ್ಷೆ ನಡೆದಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ವಿಧಾನಸಭೆಯಲ್ಲಿಂದು ಹೇಳಿದರು.ಶೂನ್ಯ ವೇಳೆಯಲ್ಲಿ ಬಿಜೆಪಿಯ ಸಿಮೆಂಟ್ ಮಂಜು, ಕಾಂಗ್ರೆಸ್‌ನ ಅಲ್ಲಮಪ್ರಭು ಪಾಟೀಲ, ಜಿ.ಟಿ. ಪಾಟೀಲ್ ರವರ ಪ್ರಸ್ತಾವಗಳಿಗೆ ಉತ್ತರಿಸಿದ ಅವರು, ಈ ಬಾರಿ ಭಾರೀ ಮಳೆಯಿಂದ ರಾಜ್ಯದ ಹಲವೆಡೆ ಬೆಳೆ ನಷ್ಟವಾಗಿರುವುದು ಸರ್ಕಾರದ ಗಮನದಲ್ಲಿದೆ. ಬೆಳೆ ನಷ್ಟದ ಕಂದಾಯ ಮತ್ತು ಕೃಷಿ ಇಲಾಖೆ ಜಂಟಿ ಸಮೀಕ್ಷೆ ನಡೆಸುತ್ತಿದೆ. ಸಮೀಕ್ಷಾ ವರದಿ ಬಂದ ನಂತರ ಎನ್‌ಡಿಆರ್‌ಎಫ್ ನಿಯಮಾವಳಿಗಳಂತೆ ಪರಿಹಾರವನ್ನು ನೀಡಲಾಗುವುದು ಎಂದರು.

ಇದರ ಜತೆಗೆ ಬೆಳೆ ನಷ್ಟದಿಂದ ಕಷ್ಟದಲ್ಲಿರುವ ರೈತರಿಗೆ ವಿಮಾ ಹಣವನ್ನು ಸಕಾಲದಲ್ಲಿ ತಲುಪಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ಅವರು ಹೇಳಿದರು.ಹೆಚ್ಚು ಹೆಚ್ಚು ರೈತರನ್ನು ವಿಮಾ ವ್ಯಾಪ್ತಿಗೆ ಒಳಪಡಿಸಲು ಕ್ರಮ ಕೈಗೊಂಡಿದ್ದೇವೆ. ಈ ಹಿಂದೆ ಬೆಳೆ ವಿಮೆಗೆ 16 ಲಕ್ಷ ರೈತರು ಮಾತ್ರ ನೋಂದಾವಣಿ ಮಾಡಿಕೊಂಡಿದ್ದರು.



ನಮ್ಮ ಸರ್ಕಾರ ಬಂದ ಮೇಲೆ ಬೆಳೆ ವಿಮೆಗೆ ನೋಂದಾಯಿಸಿರುವ ರೈತರ ಸಂಖ್ಯೆ 27 ಲಕ್ಷಕ್ಕೆ ಏರಿಕೆಯಾಗಿದೆ ಎಂದು ಹೇಳಿದರು.

ಬೆಳಗಾವಿ, ಬಿಜಾಪುರ ಜಿಲ್ಲೆಯ ಕೆಲವೆಡೆ ಅತಿ ನೀರಾವರಿಯಿಂದ ಸವಳು–ಜವಳು ಇದ್ದು, ಇದನ್ನು ಸರಿಪಡಿಸಲು ಅಗತ್ಯ ಹಣ ಒದಗಿಸಲಾಗುವುದು ಎಂದು ಅವರು ತಿಳಿಸಿದರು. ಕಲ್ಬುರ್ಗಿ ಜಿಲ್ಲೆಯಲ್ಲಿ ಕಳೆದ ವರ್ಷ 660 ಕೋಟಿ ರೂ. ಬೆಳೆ ವಿಮೆ ರೈತರಿಗೆ ಸಿಕ್ಕಿದೆ. ಇದರಲ್ಲಿ ಅರ್ಧದಷ್ಟು ಹಣವನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ. ಉಳಿದ ಹಣವನ್ನು ಕ್ರಮ ವಹಿಸಲಾಗುವುದು ಎಂದು ಅವರು ಹೇಳಿದರು.

## ವಿಧಾನಸಭೆಯಲ್ಲಿ ಮೂರು ವಿಧೇಯಕಗಳು ವಾಪಸ್



**ಬೆಂಗಳೂರು,ಆ.20–** ಕಳೆದ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ ವಿಧೇಯಕ) ಹಾಗೂ 2024ರ ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕಗಳನ್ನು ವಿಧಾನಸಭೆಯಲ್ಲಿಂದು ಹಿಂದಕ್ಕೆ ಪಡೆಯಲಾಯಿತು.

ಶಾಸನ ರಚನಾ ಕಲಾಪದಲ್ಲಿ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಈ ಮೂರೂ ವಿಧೇಯಕಗಳನ್ನು ಮಂಡಿಸಿ ಹಿಂದಕ್ಕೆ ಪಡೆಯಲು ಮನವಿ ಮಾಡಿದರು.ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪರವಾಗಿ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ಕಂದಾಯ ಸಚಿವ ಕೃಷ್ಣಭೇರೇಗೌಡರ ಪರವಾಗಿ ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಹಿಂದಕ್ಕೆ ಪಡೆಯಲು ಅನುಮತಿ ಕೋರಿದರು.

ಈ ಮೂರೂ ವಿಧೇಯಕಗಳಿಗೆ ಸಂಬಂಧಿಸಿದಂತೆ ಈಗಾಗಲೇ ಹೊಸದಾಗಿ ಹಲವಾರು ಸುಧಾರಣೆ ಕ್ರಮಗಳು, ಅನೇಕ ವಿಚಾರಗಳನ್ನೊಳಗೊಂಡ ವಿಧೇಯಕಗಳನ್ನು ತರಲಾಗಿದ್ದು, ಈ ವಿಧೇಯಕಗಳು ಅಗತ್ಯವಿರಲಿಲ್ಲ. ಹೀಗಾಗಿ ಇವುಗಳನ್ನು ಹಿಂದಕ್ಕೆ ಪಡೆಯಬೇಕೆಂದು ಕೋರಿದರು. ಬಳಿಕ ಸಭಾಧ್ಯಕ್ಷರು ಈ ವಿಧೇಯಕಗಳನ್ನು ಹಿಂದಕ್ಕೆ ಪಡೆಯಲಾಗಿದೆ ಎಂದು ಪ್ರಕಟಿಸಿದರು.

# ಕಾಂಗ್ರೆಸ್ ಸರ್ಕಾರ ಒಡೆದ ಮನೆ: ಅಶೋಕ್ ಚಾಟಿ

**ಬೆಂಗಳೂರು, ಆ.20–** ಅನುದಾನ ಹಂಚಿಕೆ, ಅಭಿವೃದ್ಧಿ ವಿಚಾರದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಸ್ವಪಕ್ಷದ ಶಾಸಕರೇ ಆಕ್ರೋಶ ಹೊರಹಾಕುತ್ತಿದ್ದು, ಒಟ್ಟಾರೆ, ಸಿದ್ದರಾಮಯ್ಯ ಅವರ ಸರ್ಕಾರ 'ಒಡೆದ ಮನೆ'ಯಾಗಿದೆ ಎಂದು ವಿಧಾನಸಭೆಯ ವಿಪಕ್ಷ ನಾಯಕ ಆರ್.ಅಶೋಕ್ ಚಾಟಿ ಬೀಸಿದರು.

ವಿಧಾನಸಭೆಯಲ್ಲಿಂದು ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆಯಲ್ಲಿ ಅನುದಾನ ಹಂಚಿಕೆ, ಅಭಿವೃದ್ಧಿಯಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಅಶೋಕ್ ಪ್ರಸ್ತಾಪಿಸಿದರು.

ಈ ಹಿಂದೆ ನಮ್ಮ ಸರ್ಕಾರ ಇದ್ದ ಸಂದರ್ಭದಲ್ಲಿ ಮಾಡಿದ್ದ 40% ಆರೋಪಕ್ಕೆ ಸಾಕ್ಷಿ ಇಲ್ಲ. ಆದರೆ ಕಾಂಗ್ರೆಸ್ ಸರ್ಕಾರ 70% ಕಮಿಷನ್ ಪಡೆದುಕೊಳ್ಳುತ್ತಿದೆ. ಮನೆ, ಕಟ್ಟಡ ನಿರ್ಮಾಣ ಅರ್ಜಿ ಸಲ್ಲಿಸಿದ ಆರಂಭದಲ್ಲೇ ಕಮಿಷನ್ ನೀಡುವ ವ್ಯವಸ್ಥೆ ಹುಟ್ಟುಹಾಕಿದೆ. ಜನರ ಮೇಲೆ ತೆರಿಗೆ ಭಾರ ಬೀಳುವಲ್ಲಿ ಈ ಸರ್ಕಾರ ಯಶಸ್ವಿಯಾಗಿದೆ ಎಂದು ವಾಗ್ದಾಳಿ ನಡೆಸಿದರು.

ಗ್ಯಾರಂಟಿಗಳಿಗಾಗಿ ಹಾಲು, ಮದ್ಯ, ಪೆಟ್ರೋಲ್, ಡೀಸಲ್ ಬೆಲೆ ಏರಿಕೆ ಮಾಡಿ ಜನರಿಗೆ ಸಂಕಷ್ಟವನ್ನುಂಟು ಮಾಡಿರುವ ಸರಕಾರ ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳಿಗೆ ಅನುದಾನ ನೀಡುತ್ತಿಲ್ಲ ಎಂದ ಅವರು, ನಾವು ಬಂದರೆ, ಬೆಂಗಳೂರನ್ನು ಕೃಷ್ಣದೇವರಾಯ ರೀತಿ ಮಾಡುತ್ತೇವೆ.

ವಜ್ರಗಳು ರಸ್ತೆಯಲ್ಲಿ ಸಿಗುತ್ತೇವೆ ಎಂದು ಕಾಂಗ್ರೆಸ್ ನಾಯಕರು ಹೇಳಿದ್ದರು. ಆದರೆ, ಈಗ ಜಲ್ಲಿ ಕಲ್ಲುಗಳು ಸಿಗುತ್ತೇವೆ. ಜತೆಗೆ, ರಸ್ತೆಗಳ ಮೇಲೆ ಗುಂಡಿಗಳು, ಕೆಳಗಡೆ ಸುರಂಗದ ಕನಸುಗಳು– ಇದುವೇ ಕಾಂಗ್ರೆಸ್‌ನ ಬ್ರ್ಯಾಂಡ್ (ಬ್ರೋಕನ್) ಬೆಂಗಳೂರಿನ ಪರಿಕಲ್ಪನೆಯಾಗಿದೆ ಎಂದು ಕಿಡಿಕಾರಿದ್ದಾರೆ.

ನಗರದ ರಸ್ತೆಗಳಲ್ಲಿ ಎಲ್ಲೇ ನೋಡಿದರೂ ಗುಂಡಿಗಳಿದ್ದು, ಸಾವಿನ ಕೂಪವಾಗಿ ಮಾರ್ಪಟ್ಟಿದೆ. ನಿರಂತರವಾಗಿ ಸುರಿಯುತ್ತಿರುವ ಮಳೆ, ಬಿಬಿಎಂಪಿಯ ನಿರುತ್ಸಾಹ ಮತ್ತು ಕಾಂಗ್ರೆಸ್ ಆಡಳಿತದ ವೈಫಲ್ಯವನ್ನು ಇದು ತೋರಿಸುತ್ತದೆ ಎಂದು ಅಶೋಕ್ ಉಲ್ಲೇಖಿಸಿದರು.ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷ ಮೂರು ತಿಂಗಳು ಆಗಿದೆ. ಎಷ್ಟು ಡೆಲಿವರಿ ಆಗಬೇಕಿತ್ತು. ಮೂರಾದರೂ ಡೆಲಿವರಿ ಆಗಬೇಕು ಎಂದು ವ್ಯಂಗ್ಯವಾಡಿದ ಅವರು, ನಮ್ಮ ಶಾಸಕರು ಕ್ಷೇತ್ರದಲ್ಲಿ ಮುಖ ತೋರಿಸದ ಪರಿಸ್ಥಿತಿ ಇದೆ.ಅವರ ಶಾಸಕರುಗಳಿಗೂ ಕೂಡ ಆಗುತ್ತಿಲ್ಲ.

ನನಗೂ ಫ್ರೀ, ಮಹದೇವಪ್ಪನಿಗೂ ಫ್ರೀ, ಕಾಕಾ ಪಾಟೀಲ್ ಗೂ ಫ್ರೀ ಅಂದಿದ್ದರು. ಇವಾಗ ನನಗೂ ಅನುದಾನ ಇಲ್ಲ, ಕಾಕಾ ಪಾಟೀಲ್ ಗೂ ಅನುದಾನ ಇಲ್ಲ. ಮಹದೇವಪ್ಪನಿಗೂ ಅನುದಾನ ಇಲ್ಲಸಿದ್ದರಾಮಯ್ಯ ಜೀವನದಲ್ಲಿ ಕಪ್ಪು ಚುಕ್ಕೆ ಕೊಟ್ಟಿದ್ದಾರೆ. ಅದು ಅನುದಾನ ಕೊಡದೇ ಸಿಎಂ ಆರ್ಥಿಕ ಸಲಹೆಗಾರರೇ ರಾಜ್ಯದ ಅಭಿವೃದ್ಧಿ ಆಗುತ್ತಿಲ್ಲ ಎಂದಿದ್ದಾರೆ. ರಾಜು ಕಾಗೇ ಕಳೆದ ವರ್ಷದಿಂದ ನನ್ನ ಗೋಳು ಆಲಿಸುತ್ತಿಲ್ಲ, ಹೀಗಾಗಿ ವಿಧಾನಸೌಧಕ್ಕೆ ಹೋಗಿ ಆತ್ಮಹತ್ಯೆ ಮಾಡಿಕೊಳ್ತೀನಿ ಎಂದಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ವಿರೋಧ ಪಕ್ಷದವರು ಆತ್ಮಹತ್ಯೆ ಮಾಡಿಕೊಳ್ಳಬೇಕು. ಆದರೆ ಆಡಳಿತ ಪಕ್ಷದ ಶಾಸಕರು ಆತ್ಮಹತ್ಯೆ ಮಾಡಿ ಕೊಳ್ಳುವ ಪರಿಸ್ಥಿತಿ ಬಂದಿದೆ. ಬಿ ಆರ್ ಪಾಟೀಲ್, ಕೂಡ ನಾನು ಹೇಳಿರೋದು ಸತ್ಯ ಎಂದಿದ್ದಾರೆ. ದಾವಣಗೆರೆ ಶಾಸಕ ನಾನು ತೆಂಗಿನಕಾಯಿಯನ್ನೇ ಹೊಡೆದಿಲ್ಲ ಎಂದಿ ದ್ದಾರೆ. ಜಿ ಪರಮೇಶ್ವರ್, ಅವರು ಸತ್ಯ ನುಡಿಯುವಂತವರು. ಅವರು ಬಾಗಲಕೋಟೆ ಬಾದಾಮಿ ಯಲ್ಲಿ ಬೆಂಕಿ ಹಾರಿಸಲು ಹೋಗಿದ್ದರು. ಆದರೆ ಅಲ್ಲಿ ಬೆಂಕಿ ಹಚ್ಚಿ ಬಂದಿದ್ದಾರೆ ಎಂದು ಅಶೋಕ್ ಹೇಳಿದರು.



ಸರ್ಕಾರಿ ಆಸ್ಪತ್ರೆ ಗೆ ಜನ ಹೋಗುತ್ತಾರೆ. ಅಲ್ಲಿ ಸಹ 100% ತೆರಿಗೆ ಹಾಕಿದ್ದಾರೆ. ನಾನು ಜಯನಗರ ಆಸ್ಪತ್ರೆಗೆ ಹೋಗಿದ್ದೇ. ಅಲ್ಲಿ ಪ್ರತಿ ಸರಿ ಬಂದಾಗ ಬಳಕೆದಾರರು ಹಣ ಕಟ್ಟಬೇಕು ಅನ್ಯಾಯ ತಾನೆ. ಹೊರ ಒಳ ರೋಗಿಗಳಿಗೆ ಬೇರೆ ಡಬಲ್ ಮಾಡಿದ್ದಾರೆ.ಒಟ್ಟಿನಲ್ಲಿ ರೋಗಿಗಳನ್ನು ಮುಟ್ಟಿದ ಮೇಲೆ ಈ ಸರ್ಕಾರಕ್ಕೆ ರೋಗವೇ ಬರುವುದು ಎಂದು ಟೀಕಿಸಿದರು. ಮೈಸೂರು ಮೃಗಾಲಯ ನೋಡಲು ಸಹ 20% ದರ ಹೆಚ್ಚಳ. ಅದೇ ಹುಲಿ, ಅದೇ ಜಿರಾಫೆ ಬಣ್ಣ ಸುಣ್ಣ ಹೊಡೆದು ವಿದೇಶಿ ಬಟ್ಟೆ ಹಾಕಿದರೆ ಪರವಾಗಿಲ್ಲ. ಏನೂ ಇಲ್ಲದೆ 20% ಹೇಗೆ ಆಗುತ್ತದೆ. ಅಲ್ಲಿಯೂ ವಸೂಲಿ ಮಾಡಬೇಕಾಅಲ್ಲಿ ಮಕ್ಕಳು ಹೋಗುತ್ತಾರೆ, ಅಲ್ಲಿ ಮಕ್ಕಳಿಗೆ ಫ್ರೀಯಾಗಿ ತೋರಿಸಬೇಕು ಎಂದು ಅಶೋಕ್ ನುಡಿದರು.

## ಅರಸು ನಂತರ ನಾನೇ ಹೆಚ್ಚು ಅವಧಿಗೆ ಸಿಎಂ



**ಮಾಜಿ ಮುಖ್ಯಮಂತ್ರಿ ದಿ, ಡಿ.ದೇವರಾಜ ಅರಸುರವರ ಜನ್ಮದಿನಾಚರಣೆ ಪ್ರಯುಕ್ತ ಮುಖ್ಯಮಂತ್ರಿ ಸಿದ್ದರಾಮಯ್ಯರವರು ವಿಧಾನಸೌಧದ ಮುಂಭಾಗವಿರುವ ಅರಸು ಭಾವಚಿತ್ರಕ್ಕೆ ಪುಷ್ಪಮಾಲೆ ಹಾಕಿ ನಮನ ಸಲ್ಲಿಸಿದರು. ಸಚಿವರಾದ ಕೆ.ಹೆಚ್ ಮುನಿಯಪ್ಪ, ಶಿವರಾಜ್ ತಂಗಡಗಿ ಮತ್ತಿತರರು ಇದ್ದಾರೆ.**

**ಬೆಂಗಳೂರು,ಆ.20–**ದಿ.ದೇವರಾಜ ಅರಸು ಅವರು 8 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿದ್ದರು, ಅವರ ನಂತರ ತಾವೇ ಹೆಚ್ಚು ಕಾಲ ಮುಖ್ಯಮಂತ್ರಿಯಾಗಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ದೇವರಾಜ ಅರಸುರವರ 110ನೇ ಜನ್ಮ ದಿನಾಚರಣೆ ಪ್ರಯುಕ್ತ ವಿಧಾನಸೌಧದ ಆವರಣದಲ್ಲಿರುವ ಅರಸುರವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವರಾಜ ಅರಸು ಬದುಕಿದ್ದಾಗ ನಾನು ಕಾಂಗ್ರೆಸ್ ಪಕ್ಷದಲ್ಲಿರಲಿಲ್ಲ. ಜನತಾ ಪಾರ್ಟಿ, ಸಮಾಜವಾದಿ, ಜೆಡಿಎಸ್ ನಂತರ ಕಾಂಗ್ರೆಸ್ ಪಕ್ಷಕ್ಕೆ ಸೇರಿದೆ ಎಂದರು.

ಈಗ ನಾನು ಮುಖ್ಯಮಂತ್ರಿಯಾಗಿ 5 ವರ್ಷ ಪೂರೈಸಿದ್ದೇನೆ. ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರಬೇಕಾದರೆ ಸಾಮಾಜಿಕ ಹಾಗೂ ಆರ್ಥಿಕ ಸ್ವಾತಂತ್ರ್ಯ ಇರಬೇಕೆಂಬ ಬಗ್ಗೆ ದೇವರಾಜ ಅರಸುರವರು ನಂಬಿಕೆ ಇಟ್ಟುಕೊಂಡಿದ್ದರು. ಇದನ್ನೇ ಬಾಬಾ ಸಾಹೇಬ್ ಅಂಬೇಡ್ಕರ್ ಸಹ ಹೇಳಿದ್ದರು ಎಂದರು.

## ಶಾಸಕ ಮುನಿರತ್ನ ಕಾಲೆಳೆದ ಡಿಸಿಎಂ ಡಿಕೆಶಿ



**ಬೆಂಗಳೂರು ಆ.19–** ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕ ಮುನಿರತ್ನ ವಿರುದ್ಧ ದಾಖಲಾಗಿರುವ ಪ್ರಕರಣಗಳ ಕುರಿತು ಪ್ರಸ್ತಾಪ ಮಾಡಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾಲು ಎಳೆದ ಪ್ರಸಂಗ ವಿಧಾನಸಭೆಯಲ್ಲಿ ನಡೆಯಿತು.

ಗ್ರೇಟರ್ ಬೆಂಗಳೂರು ವಿಧೇಯಕ ರಚನೆಯ ಬಗ್ಗೆ ವಿಧಾನಸಭೆಯಲ್ಲಿ ನಡೆದ ಚರ್ಚೆಗೆ ಉತ್ತರ ನೀಡುತ್ತಿದ್ದ ಡಿ.ಕೆ.ಶಿವಕುಮಾರ್, ಬೆಂಗಳೂರಿನ ಶಾಸಕರಿಗೆ ಬೇಡ ಎಂದರೆ ಗ್ರೇಟರ್ ಬೆಂಗಳೂರು ವಿಧೇಯಕವನ್ನು ವಾಪಸ್ ಪಡೆಯಲು ನಾನು ಸಿದ್ಧನಿದ್ದೇನೆ. ಈ ಬಗ್ಗೆ ಸುದೀರ್ಘ ಚರ್ಚೆಯಾಗಲಿ. ಎಲ್ಲರಿಗೂ ಮಾತನಾಡಲು ಅವಕಾಶ ನೀಡಲಾಗುವುದು. ನಾವೇ ಬೆಳೆಸಿದ ಶಾಸಕ ಮುನಿರತ್ನ ಅವರಿಗೂ ಅವಕಾಶ ನೀಡುತ್ತೆ?ವೆ ಎಂದರು. ಈ ಹಂತದಲ್ಲಿ ಎದ್ದುನಿಂತ ಮುನಿರತ್ನ ನನ್ನನ್ನು ಮರೆತು ಹೋಗಿದ್ದೀರಾ ಎಂದುಕೊಂಡ್ಡೆ. ನೆನಪಿಸಿಕೊಂಡಿದ್ದಕ್ಕೆ ಧನ್ಯವಾದಗಳು ಎಂದರು. ಅದಕ್ಕೆ ಪ್ರತಿಕ್ರಿಯಿಸಿದ ಡಿ.ಕೆ. ಶಿವಕುಮಾರ್, ನೀನು ಯಾವುದೋ ಪ್ರಕರಣಗಳಿಗೆ ಸಿಲುಕಿ ಎಲ್ಲೆಲ್ಲೋ ಓಡಾಡುತ್ತಿದ್ದೀಯ. ಹಾಗಾಗಿ ಮರೆತು ಹೋಗ್ದೆ ಎಂದು ಕಾಲು ಎಳೆದರು.

ಈ ಸಂದರ್ಭದಲ್ಲಿ ಮುನಿರತ್ನ ನನ್ನ ಮೇಲಿನ ಪ್ರಕರಣಗಳು ಹಾಗೂ ಡಿ.ಕೆ. ಶಿವಕುಮಾರ್ ವಿರುದ್ಧ ಪ್ರಕರಣಗಳನ್ನು ಸೇರಿಸಿ ಸಿಬಿಐ ತನಿಖೆಯಾಗಲಿ ಅಥವಾ ಅದಕ್ಕಿಂತಲೂ ದೊಡ್ಡ ಮಟ್ಟದ ತನಿಖೆ ಇದ್ದರೆ ಅದನ್ನು ಮಾಡಿ ಎಂದು ತಿರುಗೇಟು ನೀಡಿದರು. ಇದು ಕೆಲಕಾಲ ಸ್ವಾರಸ್ಯಕರ ಚರ್ಚೆಗೆ ಗ್ರಾಸವಾಯಿತು.

## ಸಾಮಾಜಿಕ ನ್ಯಾಯದ ಹರಿಕಾರ ಅರಸು




ಕಲಬುರಗಿ : ಡಿ.ದೇವರಾಜ ಅರಸು ಅವರು ಕರ್ನಾಟಕದ ಮಾಜಿ ಮುಖ್ಯಮಂತ್ರಿ. ಅವರು ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಬಹಳಷ್ಟು ಕೆಲಸ ಮಾಡಿದ್ದಾರೆ. ಅವರ ಕಾರ್ಯಗಳು ಇಂದಿಗೂ ಪ್ರಸ್ತುತವಾಗಿವೆ. ಸಾಮಾಜಿಕ ನ್ಯಾಯದ ಹರಿಕಾರರಾಗಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು. ನಗರದ ಶಹಾಬಜಾರ ಮಹಾದೇವ ನಗರದಲ್ಲಿನ 'ಸ್ವಾತಿ ಪ್ರೌಢಶಾಲೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಮತ್ತು ರಾಷ್ಟ್ರೀಯ ಸದ್ಭಾವನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಅರಸು ಅವರು ಭೂಸುಧಾರಣೆ, ಹಿಂದುಳಿದ ವರ್ಗಗಳ ಕಲ್ಯಾಣ, ಮತ್ತು ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದರು. ಅವರ ಅವಧಿಯಲ್ಲಿ ಜಾರಿಗೆ ತಂದ ಗೇಣಿದಾರಿಕೆ ಕಾಯಿದೆ ಮತ್ತು ಹಾವನೂರು ಆಯೋಗದಂತಹ ಕ್ರಮಗಳು ರೈತರು ಮತ್ತು ಹಿಂದುಳಿದ ವರ್ಗದವರ ಜೀವನದಲ್ಲಿ ಮಹತ್ವದ ಬದಲಾವಣೆಗಳನ್ನು ತಂದವು.

ಭೂಸುಧಾರಣೆ, ಉಳುವವನಿಗೆ ಭೂಮಿ ಎಂಬ ಕ್ರಾಂತಿಕಾರಿ ಆಲೋಚನೆಯನ್ನು ಜಾರಿಗೊಳಿಸಿದರು. ಇದರಿಂದಾಗಿ ಭೂಹೀನ 'ರಿಗೆ ಭೂಮಿ ಸಿಕ್ಕಿತು ಮತ್ತು ರೈತರ ಜೀವನ ಮಟ್ಟ ಸುಧಾರಿಸಿತು.ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದರು. ಹಾವನೂರು ಆಯೋಗದ ರಚನೆ ಅವರ ಪ್ರಮುಖ ಕಾರ್ಯಗಳಲ್ಲಿ ಒಂದಾಗಿದೆ. ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದರು ಮತ್ತು ಎಲ್ಲಾ ವರ್ಗದವರಿಗೂ ಸಮಾನ ಅವಕಾಶಗಳನ್ನು ಒದಗಿಸಲು ಶ್ರಮಿಸಿದರು. ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿದರು. ಅವರನ್ನು ಕರ್ನಾಟಕದ ಇತಿಹಾಸದಲ್ಲಿ ಒಬ್ಬ ಮಹಾನ್ ನಾಯಕ ಎಂದು ಪರಿಗಣಿಸಲಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಶಿವಯೋಗೆಪ್ಪಾ ಎಸ್. ಬಿರಾದಾರ, ಚನ್ನಬಸಪ್ಪ ಗಾರಂಪಳ್ಳಿ, ಸಂಗೀತಾ ಸಾಲಿ ಹಾಗೂ ಶಾಲೆಯ ಶಿಕ್ಷಕಿಯರು, ವಿದ್ಯಾರ್ಥಿಗಳು ಇದ್ದರು.

## ಪ್ರಕೃತಿ ಒಡನಾಟದಲ್ಲಿ ನಾವು ಜೀವನ ಸಾಗಿಸಬೇಕು



**ಹುಬ್ಬಳ್ಳಿ,ಆ20–** ಮನುಷ್ಯ ಪ್ರಕೃತಿ ಬಿಟ್ಟಿಲ್ಲ, ಪ್ರಕೃತಿ ಒಡನಾಟದಲ್ಲಿಯೇ ನಾವು ಜೀವನ ಸಾಗಿಸಬೇಕು ಎಂದು ದಾಸಧೇನು ಟ್ರಸ್ಟಿನ ನಿರ್ದೇಶಕರು ಮತ್ತು ಭಾರತ ವಿಕಾಸ ಸಂಘಮದ ಟಿಟಿಡಿ ಟ್ರಸ್ಟಿನ ಕನ್ನಡ ಪಬ್ಲಿಷರ್ ಆದ ಡಾ. ವಾಸುದೇವ ಅಗ್ನಿಹೋತ್ರಿ ಹೇಳಿದರು.

ನಗರದ ಕನಕದಾಸ ಶಿಕ್ಷಣ ಮಹಾವಿದ್ಯಾಲಯದ ಬಿ. ಇಡಿ ಸಭಾಂಗಣದಲ್ಲಿ ಭಾರತ ವಿಕಾಸ ಸಂಘಮ ಮತ್ತು ಕನಕದಾಸ ಶಿಕ್ಷಣ ಸಮಿತಿ ಹುಬ್ಬಳ್ಳಿ ಹಾಗೂ ಶ್ರೀಯಾ ಜನಸೇವಾ ಫೌಂಡೇಶನ ಸಂಯುಕ್ತ ಆಶ್ರಯದಲ್ಲಿ ಪ್ರಶಿಕ್ಷಣಾರ್ಥಿ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ ದೃಷ್ಟಿ ಬದಲಾದರೆ ದೃಶ್ಯ ಬದಲಾಗುತ್ತದೆ ಎಂಬ ಪ್ರಕೃತಿ ಪ್ರಕೃತಿ ಕೇಂದ್ರಿತ ಸಮಗ್ರ ವಿಕಾಸ ಎಂಬ ವಿಷಯದ ಮೇಲೆ ಹಮ್ಮಿಕೊಳ್ಳಲಾದ ಮೊದಲ ಉಪನ್ಯಾಸ ಮಾಲೆಯಲ್ಲಿ ಮುಖ್ಯ ಅತಿಥಿಗಳಾಗಿ ಅವರು ಉಪನ್ಯಾಸ ಮಾಡಿದರು. ಕಾರ್ಯಕ್ರಮದಲ್ಲಿ ಡಾ. ಶಾಂತಣ್ಣ ಕಡಿವಾಲ ಅಧ್ಯಕ್ಷೀಯ ಭಾಷಣ ಮಾಡಿದರು.ವಿ.ಜಿ ಪಾಟೀಲ್, ಕಾನೂನು ವಿ ವಿ ಸಿಂಡಿಕೇಟ್ ಸದಸ್ಯರಾದ ಡಾ. ಎಚ್ ವಿ ಬೆಳಗಲಿ, ಪ್ರೊ. ಬಸವರಾಜ ದೇವರಮನಿ, ಪ್ರೊ ಸುಭಾಷ್ ಮಾಸಗೋನಿ, ಪ್ರೊ. ಎಚ್ ಆರ್ ಕುರಿ ಸೇರಿದಂತೆ ನೂರಾರು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ಶುಭ ದೃಷ್ಟಿಗಳಾಗಿ : ಹಾರಕೂಡ ಶ್ರೀ



**ಬಸವಕಲ್ಯಾಣ:ಅ.20–** ಎಲ್ಲೆಡೆ ಶಿವಾಂಶ ತುಂಬು ತುಳುಕುತ್ತಿರುವ ಈ ಸುಂದರ ಜಗತ್ತಿನಲ್ಲಿ ಪ್ರತಿಯೊಬ್ಬರೂ ಶುಭ ದೃಷ್ಟಿಗಳಾಗಿರಬೇಕು, ಎಲ್ಲದರಲ್ಲಿ ಶುಭವನ್ನು ಕಾಣುವ, ಶುಭವನ್ನು ಹಂಚುವ, ಶುಭವನ್ನು ಸೃಷ್ಟಿಸುವ ಶುಭ ಮನಸುಳ್ಳವರಾಗಿರಬೇಕು ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ 2015–16ನೇ ಸಾಲಿನ ವಿದ್ಯಾರ್ಥಿಗಳಿಂದ ಆಯೋಜಿಸಿದ ಗುರುವಂದನೆ ಹಾಗೂ ತುಲಾಭಾರ ಮತ್ತು ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ನಮ್ಮ ಮನಸ್ಸು ಶುಭದ ಗಣಿಯಾದಾಗ ಶುಭ ಕಾರ್ಯಗಳು, ಸಮಾಜೋನ್ನತಿ ಕಾರ್ಯಗಳು ಫಲಿಸುತ್ತವೆ.

ಗುರುವಿನ ಸಾನಿಧ್ಯದಲ್ಲಿ ಕೈಗೊಳ್ಳುವ ಸತ್ಕಾರ್ಯಗಳು ಸಮಾಜದಲ್ಲಿ ಶುಭದ ಬೆಳಕು ಚೆಲ್ಲುತ್ತವೆ.ಹಾಗಾಗಿ ಎಲ್ಲದಕ್ಕೂ ಗುರು ಕಾರುಣ್ಯ ಭದ್ರ ಬುನಾದಿಯನ್ನು ಒದಗಿಸಿಕೊಡುತ್ತದೆ.ಎಲ್ಲರಿಗೂ ಒಳಿತನ್ನು ಬಯಸುವ ಮನಸ್ಸಿದ್ದರೆ ನಮ್ಮ ಬದುಕು ಕೂಡ ಒಳಿತಿನಿಂದ ಸಂಭ್ರಮಿಸುತ್ತದೆ ಎಂದು ನುಡಿದರು.ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ 2015–16ನೇ ಸಾಲಿನ ವಿದ್ಯಾರ್ಥಿಗಳ ಧರ್ಮ ಕಾರ್ಯ ನಮಗೆ ಖುಷಿ ನೀಡಿದ್ದು, ಎಲ್ಲರ ಬಾಳು ಶ್ರೇಯಸ್ಸಿನಿಂದ ಕೂಡಿರಲಿ ಎಂದು ಶುಭ ಹಾರೈಸಿದರು.

## ರಾಜಶ್ರೀ ಸಿಮೆಂಟ ಕಾರ್ಖಾನೆಯಲ್ಲಿ ವಾಹನ ಚಾಲಕ ಸಾವು



**ಸೇಡಂ, ಆ,20–** ತಾಲೂಕಿನ ಮಳಖೇಡ ಗ್ರಾಮದಲ್ಲಿರುವ ಆದಿತ್ಯ ನಗರದ ಅಲ್ಟ್ರಾಟೇಕ್ ರಾಜಶ್ರೀ ಸಿಮೆಂಟ್ ಕಾರ್ಖಾನೆಯಲ್ಲಿ ನೆನ್ನೆ ರಾತ್ರಿ ಆರ್ ಸಿ ಪೊರ್ ಏರಿಯಾದಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ ಕಾರ್ಮಿ ಕನಾದ ಅಂಬರೀಶ್ ತಂದೆಯ ಲ್ಲಪ್ಪ ಬೊಮ್ಮನಹಳ್ಳಿ ಅವರಿಗೆ ಇಟಚ್ಚೆ ಡಿಕ್ಕಿ ಆದ ಪರಿಣಾಮ ಕಾರ್ಮಿಕ ಸ್ಥಳದಲ್ಲೇ ದುರ್ಮರಣ ಹೊಂದಿದಾನೆ ಎಂದು ತಿಳಿದು ಬಂದಿದೆ.

# ಸರ್ವೋದಯ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಸಂಭ್ರಮ





**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.20–** ಪಟ್ಟಣದ ಸರ್ವೋದಯ ಶಾಲೆಯಲ್ಲಿ ಬುಧವಾರ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಅಪಾರ ಸಂಭ್ರಮ ಮತ್ತು ಸಡಗರದಿಂದ ಆಚರಿಸಲಾಯಿತು. ಶಾಲೆಯ ಮಕ್ಕಳು ಮತ್ತು ಶಿಕ್ಷಕರು ಈ ಹಬ್ಬದ ಆಚರಣೆಯಲ್ಲಿ ಉತ್ಸಾಹದಿಂದ ಭಾಗವಹಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯೆಂದರೆ, ಶಾಲೆಯ ಪುಟಾಣಿಗಳು ಶ್ರೀಕೃಷ್ಣ ಮತ್ತು ರಾಧೆಯ ವೇಷಭೂಷಣಗಳನ್ನು ಧರಿಸಿ ಎಲ್ಲರ ಗಮನ ಸೆಳೆದರು. ಕೊಳಲು ಹಿಡಿದು, ನವಿಲುಗರಿ ಕಿರೀಟ ಧರಿಸಿದ ಪುಟ್ಟ ಕೃಷ್ಣನ ವೇಷಧಾರಿಗಳು ಹಾಗೂ ಸುಂದರ ಉಡುಪುಗಳಲ್ಲಿ ಕಂಗೊಳಿಸಿದ ರಾಧೆಯ ವೇಷಧಾರಿಗಳು ಶಾಲೆಗೆ ಕಳೆ ತಂದರು.

ಇದೇ ವೇಳೆ, ಶ್ರೀಕೃಷ್ಣನ ಬಾಲ್ಯದ ಲೀಲೆಗಳನ್ನು ನೆನಪಿಸುವ 'ಮಡಕೆ ಒಡೆಯುವ' ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳು ಮಾನವ ಪಿರಮಿಡ್ ರಚಿಸಿ, ಎತ್ತರದಲ್ಲಿ ಕಟ್ಟಿದ ಮಡಕೆಯನ್ನು ಒಡೆದು ಸಂಭ್ರಮಿಸಿದರು. ಇದು ಕಾರ್ಯಕ್ರಮಕ್ಕೆ ಮತ್ತಷ್ಟು ಹುರುಪು ತುಂಬಿತು.

ಸರ್ವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮನೋಜ್ ಮಿಶ್ರಾ ಮಾತನಾಡಿ, "ಶ್ರೀಕೃಷ್ಣನ ಜೀವನದ ಸಂದೇಶಗಳು ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸುತ್ತವೆ. ಇಂತಹ ಹಬ್ಬಗಳ ಆಚರಣೆ ನಮ್ಮ ಸಂಸ್ಕೃತಿಯನ್ನು ಉಳಿಸಲು ಮತ್ತು ಮುಂದಿನ ಪೀಳಿಗೆಗೆ ಹಸ್ತಾಂತರಿಸಲು ಸಹಾಯ ಮಾಡುತ್ತದೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಪ್ರವೀಣ್ ಕುಮಾರ್ , ತಿಮ್ಮಾರೆಡ್ಡಿ, ಮುಖ್ಯೋ ಪಾಧ್ಯಾಯರಾದ ರಂಗಪ್ಪ ಸಹ ಶಿಕ್ಷಕರಾದ ತೇಜೇಶ್ವರಿ, ನಾಜಿ ಯ, ವರಲಕ್ಷ್ಮಿ, ಶರತ್ , ಹನುಮಂತರಾಯ, ಮಹಿಬೂಬ್ ಖಾನ್ ,ಚೈತ್ರ, ಶ್ವೇತ ಹೇಮಾ, ಭಾಗ್ಯಮ್ಮ, ಉಮೇ ಕುಲಸುಂ, ಹಲೆಮಾ,ಹರ್ಷಿಯ ಸೇರಿದಂತೆ ಇತರರು ಇದ್ದರು.

# ಮೆಟ್ರಿಕ್ ನಂತರದ ಕೋರ್ಸಗಳ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಆ.20–**ಇಲ್ಲಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿನ ಶೈಕ್ಷಣಿಕ ವರ್ಷದ 2025ರಲ್ಲಿ ಮಾತ್ರ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಮೆಟ್ರಿಕ್ ನಂತರದ ಕೋರ್ಸ್ಗಳಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ ಪ್ರೋತ್ಸಾಹ ಧನ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಪಿಯುಸಿ, 3 ವರ್ಷ ಡಿಪ್ಲೋಮಾಗೆ 20 ಸಾವಿರ, ಪದವಿಗೆ 25 ಸಾವಿರ, ಸ್ನಾತಕೋತ್ತರ ಕೋರ್ಸಗಳಿಗೆ 30 ಸಾವಿರ, ಪಿ.ಜಿ ತಾಂತ್ರಿಕ ಕೋರ್ಸಗಳಿಗೆ 35 ಸಾವಿರ ರೂಪಾಯಿಗಳನ್ನು ನೀಡಲಾಗುತ್ತಿದ್ದು, ತೇರ್ಗಡೆಯಾದ ವಿದ್ಯಾರ್ಥಿಗಳು ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ: https://twd.karnataka.gov.in/TWPostprizemoney ನ ಮುಖಾಂತರ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಿದ ನಂತರ ಅದರ ದೃಢೀಕೃತ ಪ್ರತಿಯನ್ನು ಎಲ್ಲಾ ದಾಖಲೆಗಳ ಸಮೇತ ಆಯಾ ಜಿಲ್ಲಾ ಅಥವಾ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಗಳಿಗೆ 04 ದಿನದೊಳಗಾಗಿ ಸಲ್ಲಿಸಬೇಕು.

**ಷರತ್ತುಗಳು:** ವಿದ್ಯಾರ್ಥಿಗಳು ದ್ವಿತೀಯ ಅಥವಾ ಅಂತಿಮ ವರ್ಷದ ಪಿ.ಯು.ಸಿ.ಯನ್ನು 2024–25ನೇ ಶೈಕ್ಷಣಿಕ ವರ್ಷದ 2025ರಲ್ಲಿ ವ್ಯಾಸಂಗ ಮಾಡಿರಬೇಕು. ಸಿ.ಬಿ.ಎಸ್.ಸಿ ಮತ್ತು ಐ.ಸಿ.ಎಸ್.ಇ. ವತಿಯಿಂದ ನಡೆಸಲಾಗುವ 12ನೇ ತರಗತಿ ಪರೀಕ್ಷೆಯಲ್ಲಿ ಪಾಸಾದವರು ಸಹ ಅರ್ಹರಿರುತ್ತಾರೆ. ಪದವಿ, ಸ್ನಾತಕೋತ್ತರ ಪದವಿ, ಕೃಷಿ, ಪಶುಸಂಗೋಪನೆ, ಇಂಜಿನಿಯರಿಂಗ್, ಮೆಡಿಕಲ್ ಕೋರ್ಸ್ಗಳಿಗೆ ಸಂಬಂಧಿಸಿದಂತೆ ಪ್ರತಿ ವರ್ಷ ಪಬ್ಲಿಕ್ ಪರೀಕ್ಷೆ ಇದ್ದಲ್ಲಿ ಪ್ರತಿ ವರ್ಷ ಪ್ರಥಮ ಪ್ರಯತ್ನದಲ್ಲಿ ಪಾಸಾಗಿರಬೇಕು. ಮತ್ತು ಅಂತಿಮವಾಗಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಈ ಕೋರ್ಸಗಳಿಗೆ ಸೆಮಿಸ್ಟರ್ ಪದ್ಧತಿಯಿದ್ದಲ್ಲಿ ಎಲ್ಲಾ ಸೆಮಿಸ್ಟರ್‌ಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪಾಸಾಗಿರಬೇಕು. ಮತ್ತು ಅಂತಿಮವಾಗಿ ಪ್ರಥಮ ದರ್ಜೆಯಲ್ಲಿ ಪಾಸಾಗಿರಬೇಕು. ಈ ಎರಡೂ ಕೋರ್ಸಗಳಲ್ಲಿ ಪ್ರತಿ ವರ್ಷದ ಪರೀಕ್ಷೆ ಅಥವಾ ಸಮಿಸ್ಟರ್‌ಗಳಲ್ಲಿ ಕ್ಯಾರಿ ಓವರ್ ಪದ್ಧತಿರಡಿ ಪಾಸಾಗಿದ್ದರೆ ಅಂತಹವರು ಅರ್ಹರಿರುವುದಿಲ್ಲ. ಕರ್ನಾಟಕ ರಾಜ್ಯ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಮೇಲ್ಕಂಡ ಕೋರ್ಸಗಳಲ್ಲಿ ಹೊರರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದರೆ ಅಂತಹವರು ಅರ್ಹರಿರುತ್ತಾರೆ. ಆದರೆ ಹೊರ ದೇಶಗಳಲ್ಲಿ ವ್ಯಾಸಂಗ ಮಾಡಿದ್ದರೆ ಅಂತಹವರು ಅರ್ಹರಿರುವುದಿಲ್ಲ. ರಾಜ್ಯ ಅಥವಾ ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದ ವಿಶ್ವವಿದ್ಯಾಲಯ, ಯು.ಜಿ.ಸಿ.ಯಿಂದ ಮಾನ್ಯತೆ ಪಡೆದ ಡೀಮ್ಡ್ ವಿಶ್ವವಿದ್ಯಾಲಯಗಳಡಿ ಬರುವ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಸ್ವಾಯತ್ತ) ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಿರುತ್ತಾರೆ.

ಸರ್ಕಾರದಿಂದ ಮಾನ್ಯತೆ ಪಡೆಯದಿರುವ ವಿದ್ಯಾಸಂಸ್ಥೆಯಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳು ಈ ಯೋಜನೆಗೆ ಅರ್ಹರಿರುವುದಿಲ್ಲ. ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ರವರ ಆದೇಶ ಸಂಖ್ಯೆ: ಸಕನಿ:ಇಡಿ–7:ಸಿಆರ್–21: 2016–17 ದಿನಾಂಕ: 03–10–2016ರ ಪ್ರಕಾರ ದೂರಶಿಕ್ಷಣ ಸಂಸ್ಥೆಗಳ ಮೂಲಕ ವ್ಯಾಸಂಗ ಮಾಡಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆ/ಪೋಸ್ಟ್ ಆಫೀಸ್ ಖಾತೆಗೆ ಆಧಾರ್ ಜೋಡಣೆಯನ್ನು ಮಾಡಿಸಿರಬೇಕು (ಎನ್.ಪಿ.ಸಿ.ಐ. ಯೊಂದಿಗೆ ಜೋಡಣೆ ಮಾಡಿಸುವುದು).ವಿದ್ಯಾರ್ಥಿಗಳ ಹೆಸರು ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ ಆಧಾರ್ ಕಾರ್ಡನಲ್ಲಿ ಹಾಗೂ ಬ್ಯಾಂಕ್‌ಬಪುಸ್ತಕದಲ್ಲಿ ಒಂದೇ ಇರುವಂತೆ ನೋಡಿಕೊಳ್ಳತಕ್ಕದ್ದು, ಸಿ.ಜಿ.ಪಿ ಕೋರ್ಸು ನೀಡುವ ಕೋರ್ಸಗಳ ವಿದ್ಯಾರ್ಥಿಗಳ ಫಲಿತಾಂಶವು ವಿಶ್ವವಿದ್ಯಾಲಯವು ನಿಗಧಿಪಡಿಸುವ ಪ್ರಥಮ ಶ್ರೇಣಿಯ ಆಧಾರ್ ಮೇಲೆ ಅಥವಾ ಮಾನದಂಡದ ಮೇಲೆ ಪೋತ್ಸಾಹಧನ ಮಂಜೂರಾತಿಗೆ ಪರಿಗಣಿಸಲಾಗುವುದು.

ವಿಶೇಷ ಸೂಚನೆ: ಜಿಲ್ಲಾ ಕಚೇರಿಯಿಂದ ಪ್ರೋತ್ಸಾಹಧನ ಮಂಜೂರು ಮಾಡುವಾಗ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ಅಂಕಪಟ್ಟಿಗಳನ್ನು ಒದಗಿಸಲು ಸೂಚಿಸಿದ್ದಲ್ಲಿ ವಿದ್ಯಾರ್ಥಿಗಳು ಹಾಜರುಪಡಿಸತಕ್ಕದ್ದು, ಹಾಗೂ ಪದವಿ ಅಥವಾ ಸ್ನಾತಕೋತ್ತರ ವಿದ್ಯಾರ್ಥಿಗಳು ನೈಜತೆಯ ಪರಿಶೀಲನೆಗಾಗಿ ವಿಶ್ವವಿದ್ಯಾಲಯದಿಂದ ನೀಡಲಾದ ಯು.ಯು.ಸಿ.ಎಂ.ಎಸ್ ಲಾಗಿನ್ ನೋಂದಣಿ ಸಂಖ್ಯೆಯ ಸರಿಯಿರುವ ಪಾಸ್ವರ್ಡನ್ನು ಅರ್ಜಿಯಲ್ಲಿ ಬರೆಯಬೇಕು. ಒಂದು ವೇಳೆ ಒದಗಿಸದೇ ಇರುವಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರಿನಲ್ಲಿ ಉಪ ಲೋಕಾಯುಕ್ತರ ಪ್ರವಾಸ

**ರಾಯಚೂರು,ಆ.20–**ಆಗಸ್ಟ್ 28 ರಿಂದ 30ರವರೆಗೆ ಮೂರು ದಿನಗಳ ಕಾಲ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಸಾರ್ವಜನಿಕ ಕುಂದುಕೊರತೆಗಳನ್ನು ಆಲಿಸಲು, ದೂರುಗಳು ಅಥವಾ ಅರ್ಜಿಗಳನ್ನು ಸ್ವೀಕರಿಸಲು ಮತ್ತು ಬಾಕಿ ಇರುವ ದೂರುಗಳ ವಿಚಾರಣೆ ಮತ್ತು ವಿಲೇವಾರಿ ಕುರಿತಂತೆ ಕರ್ನಾಟಕ ಲೋಕಾಯುಕ್ತ ಮಾನ್ಯ ಉಪ ಲೋಕಾಯುಕ್ತರು ಹಾಗೂ ಅವರ ಅಧೀನ ಅಧಿಕಾರಿಗಳು ಜಿಲ್ಲೆಗೆ ಭೇಟಿ ನೀಡಲಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು.

ಆಗಸ್ಟ್ 29ರ ಬೆಳಿಗೆ 10 ರಿಂದ 1.30ರವರೆಗೆ ಮತ್ತು ಮಧ್ಯಾಹ್ನ 2.30 ರಿಂದ 5 ಗಂಟೆವರೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಶ್ರೀ ಜಗಜ್ಯೋತಿ ಬಸವೇಶ್ವರ ಆಡಿಟೋರಿಯಮ್ ಸಭಾಂಗಣದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಂಡಿದ್ದು, ಸಾರ್ವಜನಿಕರು ಭಾಗಿಯಾಗಿ ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೂರಿಯಾ, ಡಿಎಪಿ ರಸಗೊಬ್ಬರ ಜಿಲ್ಲೆಯಲ್ಲಿ ಲಭ್ಯ

**ರಾಯಚೂರು,ಆ.20–**ಕೃಷಿ ಇಲಾಖೆಯಿಂದ 2025–26 ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಗೆ ನಿಗದಿಪಡಿಸಿದ ಗುರಿಯಂತೆ ಯೂರಿಯಾ ಹಾಗೂ ಡಿಎಪಿ ರಸಗೊಬ್ಬರ ಜಿಲ್ಲೆಗೆ ಬರುತ್ತಿದ್ದು, ರಸಗೊಬ್ಬರದ ಕೊರತೆ ಬಗ್ಗೆ ರೈತರು ಆತಂಕಪಡುವ ಅವಶ್ಯಕತೆ ಇರುವುದಿಲ್ಲ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚಹಾಣ್ ಅವರು ತಿಳಿಸಿದ್ದಾರೆ.

ಆಗಸ್ಟ್ 19ರಂದು ಜಿಲ್ಲೆಯ ಪಿಎಸಿಎಸ್ ಹೀರಾಪುರ–18, ಒಜಿಜಿಎಸ್ ಹುಣಸಿಹಾಳ್ ಹುಡಾ–18, ಪಿಎಸಿಎಸ್ ದಿನ್ನಿ–18, ಆರ್‌ಎಪಿಸಿಎಮ್‌ಎಸ್ ರಾಯಚೂರು–18, ಪಿಎಸಿಎಸ್ ದೇವಸಗೂರ–9, ಎಫ್‌ಪಿಒ ಗೋನಾಳ್–9, ಅಹಲ್ಯಾಭಾಯಿ ಎಫ್‌ಪಿಒ–9, ನಂದಿ ಎಫ್‌ಪಿಒ ನೆಲ್ಹಾಲ್–9, ಬೃಂದಾವನ ಎಫ್‌ಪಿಒ–10, ಒಜಿಜಿಎಸ್ ಕಲಾಮಲ–18, ಕಲ್ಪತರು ಸೊಸೈಟಿ–18, ಟಿಎಪಿಸಿಎಮ್‌ಎಸ್ ದೇವದುರ್ಗ–18, ಒಜಿಜಿಎಸ್ ಅರಕೇರಾ–18, ಪಿಎಸಿಎಸ್ ಗಬ್ಬೂರ್–18, ರೈತ ಪರಿಶ್ರಮ ಎಫ್‌ಪಿಒ–36, ಕಲ್ಪವೃಕ್ಷ ಎಫ್‌ಪಿಒ–18, ಒಜಿಜಿಎಸ್ ರಾಜಾಲಬಂಡ–18, ಪಿಎಸಿಎಸ್ ತೋರಣದಿನ್ನಿ–18, ಪಿಎಸಿಎಸ್ ಅಲ್ದಾಲ್ ಗವಿಗಟ್ಟು–9, ಕೊಟ್ಟೂರೇಶ್ವರ ಎಫ್‌ಪಿಒ–10, ಮಹಾನದೀಶ್ವರ್ ಎಫ್‌ಪಿಒ–10, ಮಾನ್ವಿ ಫೆಡ್ ಎಫ್‌ಪಿಒ–10, ಮರಡಿ ಗಂಗಾಧರ ಎಫ್‌ಪಿಒ–10, ಪಿಎಸಿಎಸ್ ಹಾಲಾಪುರ–18, ಪಿಎಸಿಎಸ್ ಕಾತರಕಿ–18, ಪಿಎಸಿಎಸ್ ಬ್ಯಾಗ್ವಾಟ–18, ಪಿಎಸಿಎಸ್ ಬುಡಿವಾಲ್–18, ಪಿಎಸಿಎಸ್ ಉದ್ಬಾಲ್–18, ಪಿಎಸಿಎಸ್ ಮಲ್ಲಾಪುರ–18, ಪಿಎಸಿಎಸ್ ಹರಾಪುರ–18, ಪಿಎಸಿಎಸ್ ಸಿಂಧನೂರು–18, ಪಿಎಸಿಎಸ್ ಜವಳಗೇರಾ–18, ಪಿಎಸಿಎಸ್ ಗೋನ್ವಾರ್–18, ಅಂಬಾದೇವಿ ಎಫ್‌ಪಿಒ ಹುಡಾ–10 ಮೆಟ್ರೀಕ್ ಟನ್ ಯೂರಿಯಾ ಗೊಬ್ಬರ ವಿತರಿಸಲಾಗಿದೆ.

ಪಿಎಸಿಎಸ್ ಹೀರಾಪುರ–18, ಒಜಿಜಿಎಸ್ ಹುಣಸಿಹಾಳ್ ಹುಡಾ–18, ಪಿಎಸಿಎಸ್ ದಿನ್ನಿ–18, ಆರ್‌ಎಪಿಸಿಎಮ್‌ಎಸ್ ರಾಯಚೂರು–18, ಪಿಎಸಿಎಸ್ ದೇವಸಗೂರ–9, ರಾಯಚೂರು ಎಫ್‌ಪಿಒ ಗೋನಾಳ್–9, ಅಹಲ್ಯಾಭಾಯಿ ಎಫ್‌ಪಿಒ–9, ನಂದಿ ಎಫ್‌ಪಿಒ ನೆಲ್ಹಾಲ್–9, ಪಿಎಸಿಎಸ್ ಗಿಲ್ಲೆಸುಗೂರು–18, ಟಿಎಪಿಸಿಎಮ್‌ಎಸ್ ದೇವದುರ್ಗ–18, ಒಜಿಜಿಎಸ್ ಅರಕೇರಾ–18, ಪಿಎಸಿಎಸ್ ಗಬ್ಬೂರ್–18, ರೈತ ಪರಿಶ್ರಮ ಎಫ್‌ಪಿಒ–36, ಕಲ್ಪವೃಕ್ಷ ಎಫ್‌ಪಿಒ–18, ಪಿಎಸಿಎಸ್ ಅಲ್ದಾಲ್ ಗವಿಗಟ್ಟು–9, ಪಿಎಸಿಎಸ್ ಹೀರೆಕೊಟ್ನೇಕಲ್–18, ಪಿಎಸಿಎಸ್ ಬ್ಯಾಗ್ವಾಟ–18, ಪಿಎಸಿಎಸ್ ಗೋನ್ವಾರ್–18, ತುಂಗಾಭದ್ರ ಎಫ್‌ಪಿಒ–9 ಮೆಟ್ರೀಕ್ ಟನ್ ಜಿಲ್ಲೆಯಲ್ಲಿ ಡಿ.ಎ.ಪಿ ಗೊಬ್ಬರ ವಿತರಿಸಲಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವದುರ್ಗ: ದೇವರಾಜು ಅರಸ್ ಜಯಂತಿ ಆಚರಣೆ

**ಯುವ ಮಾರ್ಗ ಸುದ್ದಿ**



**ದೇವದುರ್ಗ,ಆ.20–** ತಾಲೂಕ ಆಡಳಿತ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ ವತಿಯಿಂದ ಮಿನಿ ವಿಧಾನಸೌಧದ ಸಭಾಂಗಣದಲ್ಲಿ ಮಾಜಿ ಮುಖ್ಯಮಂತ್ರಿ ದಿವಂಗತ ದೇವರಾಜ್ ಅರಸ್ ಜಯಂತಿಯನ್ನು ಆಚರಿಸಲಾಯಿತು ಬಸವರಾಜ ಹಟ್ಟಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಅಧ್ಯಕ್ಷ ಶರಣಗೌಡ ಮಾತನಾಡಿ, ಡಿ ದೇವರಾಜ ಅರಸ್ ಹಿಂದುಳಿದ ವರ್ಗಗಳ ನಾಯಕ ಶೋಷಿತರ ದೀನ ದಲಿತರ ಜನಸಾಮಾನ್ಯರ ಏಳಿಗೆಗಾಗಿ ಶ್ರಮಿಸಿದರು. ರಾಜ್ಯದಲ್ಲಿ ಎಲ್ ಜಿ ಹಾವನೂರು ವರದಿ ಅನುಷ್ಠಾನಗೊಳಿಸಿ ಸಮಾಜದಲ್ಲಿ ಜಾತಿ ಪದ್ಧತಿ ನಿರ್ಮೂಲನೆ ಮಾಡಿ ಸಾಮಾಜಿಕ ಶೈಕ್ಷಣಿಕ ಆರ್ಥಿಕ ಸಮಾನತೆಯನ್ನು ಹಿಂದುಳಿದ ವರ್ಗಗಳಲ್ಲಿ ತಂದು ಕೊಟ್ಟರು ಭೂ ರೈತರಿಗೆ ಭೂಮಿಯ ಹಂಚಿಕೆ ಮಾಡಿ ರಾಜ್ಯದಲ್ಲಿ ಆರ್ಥಿಕ ಸಬಲೀಕರಣಕ್ಕೆ ಮುನ್ನುಡಿ ಬರೆದರೆಂದು ತಮ್ಮ ಅಭಿಪ್ರಾಯಗಳ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ರಾಜಶೇಖರ್ ವಿಶ್ವಕರ್ಮ,ಗೌರಿ ಜಿ. ನಾಯಕ್ ಗ್ಯಾರೆಂಟಿ ಸಮಿತಿ ಅಧ್ಯಕ್ಷ ಲಕ್ಷ್ಮಣ ಜ್ಯೋತಿ ಪುರಸಭೆ ಅಧ್ಯಕ್ಷ ಮಲ್ಲಮ್ಮ ಶಾಂತಪ್ಪ ಎಂಬೆರಾಳ ಎಚ್. ಶಿವರಾಜ್ ಅಧ್ಯಕ್ಷರು ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ದೇವದುರ್ಗ ಹನುಮಂತರಾಯ ಶಾಖೆ ಅಧ್ಯಕ್ಷರು ತಾಲೂಕ ನೌಕರರ ಒಕ್ಕೂಟ ದೇವದುರ್ಗ ಬಾಬಣ್ಣ ತಾಲೂಕ ಹಿಂದುಳಿದ ವರ್ಗಗಳ ಅಧಿಕಾರಿ ಭೀಮರಾಯ ನಾಯಕ್ ಮೇಟಿ ರಾಜಕುಮಾರ್ ದೋಣಿ ಯಲ್ಲಪ್ಪ ಪ್ರವೀಣ್ ಕುಮಾರ್ ಭೋಜಣ್ಣ ಮಿಣಜಿಗಿ ಗೂಳಪ್ಪ ರಾಘವೇಂದ್ರ ಭೀಮಣ್ಣ ಬಸಲಿಂಗಪ್ಪ ಹೇಮನೂರ ರಮೇಶ್ ನರಸಪ್ಪ ನೀಲೋಂಜಿ ಭೋಜಪ್ಪ ಮಿಣಜಿಗಿ ಚಂದ್ರಶೇಖರ್ ವಿಶ್ವಕರ್ಮ ಲಕ್ಷ್ಮಣ್ ಕೊಪ್ಪರ್ ಸೇರಿದಂತೆ ತಾಲೂಕ ವಿವಿಧ ಇಲಾಖೆಯ ನೌಕರರು ಸೇರಿದಂತೆ ವಿವಿಧ ಸಂಘಟನೆಯ ಮುಖಂಡರು ಹಿಂದುಳಿದ ವರ್ಗಗಳ ಘಟಕದ ಪದಾಧಿಕಾರಿಗಳು ಇತರೆ ಸಂಘಸ್ಥ ಮುಖಂಡರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಪ್ರಧಾನಮಂತ್ರಿ ಆವಾಸ್ ಯೋಜನೆಯ ಮನೆಗಳ ಫಲಾನುಭವಿಗಳ ಆಯ್ಕೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.20–** ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬಡವರಿಗೆ ಅನುಕೂಲವಾಗಲೆಂದು ಸರ್ಕಾರದಿಂದ ಕಡಿಮೆ ವೆಚ್ಚ ಮತ್ತು ಸುಸಜ್ಜಿತ ಸೌಲಭ್ಯಯುಳ್ಳ ಮನೆಯನ್ನು ಒದಗಿಸಿಕೊಡಲಾಗುತ್ತಿದ್ದು, ಅರ್ಹ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಮುಂದೆ ಬರುವಂತೆ ವ್ಯಾಪಕ ಪ್ರಚಾರಕ್ಕೆ ಕ್ರಮವಹಿಸಬೇಕು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ ಅವರು ಹೇಳಿದರು.




ಬುಧವಾರ ದಂದು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪ ಘಟಕ ಎ.ಹೆಚ್.ಪಿಆರ್ ಡಿ 2,419 ಮನೆಗಳಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ ಪಂಗಡ ವರ್ಗದ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಯೋಜನೆಯಡಿ ಈಗಾಗಲೇ 578 ಅರ್ಜಿದಾರರು ನೋಂದಣಿ ಮಾಡಿಕೊಂಡಿದ್ದು, ಬಾಕಿ ಉಳಿದ 754 ಮನೆಗಳಿಗೆ ಅರ್ಜಿಗಳನ್ನು ಭರ್ತಿ ಮಾಡಲು ಸಾಮಾಜಿಕ ಜಾಲತಾಣಗಳು, ಮತ್ತು ಮಹಾನಗರ ಪಾಲಿಕೆಯ ಸ್ವಚ್ಛತಾ ವಾಹನಗಳ ಮೂಲಕ ಎಲ್ಲಾ ತರಹದ ಪ್ರಚಾರಕ್ಕೆ ಕೂಡಲೇ ವ್ಯವಸ್ಥೆ ಮಾಡಬೇಕು. ಹೀಗಾದಲ್ಲಿ ಆಕ್ಷೇಪಣೆಗೆ ಮೀರಿ ಹೆಚ್ಚಿನ ಅರ್ಜಿಗಳು ಬರಲು ಸಾಧ್ಯವಾಗುತ್ತದೆ.

ಈ ಯೋಜನೆಯಿಂದ ಬಡವರಿಗೆ ಸಾಕಷ್ಟು ಅನುಕೂಲವಾಗಲಿದೆ. ಅರ್ಹರು ಈ ಯೋಜನೆಯ ಲಾಭ ಪಡೆಸುಕೊಂಡಲ್ಲಿ ಮಕ್ಕಳಿಗೆ ಒಳ್ಳೆಯ ನಿವೇಶನ ಮತ್ತು ಒಳ್ಳೆಯ ಜೀವನ ಕೊಡಿಸಬಹುದಾಗಿದೆ. ಪ್ರತಿಯೊಬ್ಬರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಪ್ರಚಾರ ಕಾರ್ಯವನ್ನು ಕೂಡಲೇ ಆರಂಭಿಸಬೇಕು ಎಂದು ಆಯುಕ್ತರು ನಿರ್ದೇಶನ ನೀಡಿದರು.

ಇದೆ ವೇಳೆ ವಾಲ್ಮೀಕಿ ಸಂಘದ ಸದಸ್ಯರಾದ ಎನ್ ರಘುವೀರ ನಾಯಕ ಅವರು ಮಾತನಾಡಿ, ಈ ಯೋಜನೆಯನ್ನು ಪಡೆಯಲು ಮುಂಗಡವಾಗಿ ಪಾವತಿಸಬೇಕಾದ ಹಣವನ್ನು ಕಂತುಗಳ ಮಾದರಿಯಲ್ಲಿ ಪಡೆದರೆ ಫಲಾನುಭವಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಆಡಳಿತ ಉಪ ಆಯುಕ್ತರಾದ ಸಂತೋಷ್ ರಾಣಿ, ಸಿ.ಎಲ್.ಟಿ.ಸಿ ಮತ್ತು ಡಿ.ಯು.ಡಿ.ಸಿಯ ಅಧಿಕಾರಿಯಾದ ಹಂಪಮ್ಮ, ಕರ್ನಾಟಕ ಮಾದಿಗ ಯುವಸೇನೆ ಯಕಲಾಪುರ ಸದಸ್ಯರಾದ ಉದಯಕುಮಾರ, ನರಸಪ್ಪ ಪರಶಪ್ಪ ಜಾಲದಾರ್ ಸೇರಿದಂತೆ ಇತರರು

# ಕಾರು ಡಿಕ್ಕಿ: ಬೈಕ್ ಸವಾರ ಸಾವು

**ಕಲಬುರಗಿ,ಆ.20–**ಕಾರು ಡಿಕ್ಕಿ ಹೊಡೆದು ಬೈಕ್ ಸವಾರನೊಬ್ಬ ಮೃತಪಟ್ಟಿರುವ ಘಟನೆ ಸುಂಟನೂರ ಕ್ರಾಸ್ ಹತ್ತಿರ ನಡೆದಿದೆ.

ಜೆಸ್ಕಾಂ ಕಚೇರಿಯಲ್ಲಿ ಗಣಕಯಂತ್ರ ಡಾಟಾ ಎಂಟ್ರಿ ಕೆಲಸ ಮಾಡುತ್ತಿದ್ದ ತಡಕಲ್ ಗ್ರಾಮದ ಪ್ರಮೋದಕುಮಾರ ಮಳಗಿ ಮೃತಪಟ್ಟವರು.ಪ್ರಮೋದಕುಮಾರ ಕೆಲಸದ ನಿಮಿತ್ಯ ದಿನಾಲು ತಡಕಲ್ ಗ್ರಾಮದಿಂದ ಕಲಬುರಗಿಗೆ ಬಂದು ಹೋಗುತ್ತಿದ್ದರು. ಆ.18 ರಂದು ಸಹ ಕಲಬುರಗಿಗೆ ಬಂದು ಕೆಲಸ ಮುಗಿಸಿಕೊಂಡು ಮರಳಿ ತಡಕಲ್ ಗ್ರಾಮಕ್ಕೆ ಬೈಕ್ ಮೇಲೆ ಹೋಗುತ್ತಿದ್ದಾಗ ಸುಂಟನೂರ ಕ್ರಾಸ್ ಹತ್ತಿರ ಕಾರು ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡಿದ್ದರು. ಕಲಬುರಗಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

# ಮನೆ ಬೀಗ ಮುರಿದು 1.15 ಲಕ್ಷ ಕಳವು

**ಕಲಬುರಗಿ,ಆ.19–**ಮನೆ ಬೀಗ ಮುರಿದು 1.15 ಲಕ್ಷ ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿರುವ ಘಟನೆ ಪಂಚಶೀಲ ನಗರದಲ್ಲಿ ನಡೆದಿದೆ.ಲಕ್ಷ್ಮೀಕಾಂತ ಹಡಗಿಲ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 20 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ತಾಳಿ, 40 ಸಾವಿರ ರೂ.ಮೌಲ್ಯದ ತಲಾ 5 ಗ್ರಾಂ.ಬಂಗಾರದ 2 ಸುತ್ತುಂಗುರ, 10 ಸಾವಿರ ರೂ.ಮೌಲ್ಯದ 2.5 ಗ್ರಾಂ.ಬಂಗಾರದ ಸುತ್ತುಂಗುರ, 8 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ಕಿವಿಯೋಲೆ, 2 ಸಾವಿರ ರೂ.ಮೌಲ್ಯದ 20 ಗ್ರಾಂ.ಬೆಳ್ಳಿಯ ಉಡದಾರ, 5 ಸಾವಿರ ರೂ.ಮೌಲ್ಯದ 50 ಗ್ರಾಂ.ಬೆಳ್ಳಿಯ ಖಡೆ, 10 ಸಾವಿರ ರೂ.ಮೌಲ್ಯದ 100 ಹಾಗೂ 20 ಸಾವಿರ ರೂ.ನಗದು ಸೇರಿ 115000 ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H